ಸಂಪುಟ : 9 ಸಂಚಿಕೆ 182 ಪುಟ : 4 ಬೆಲೆ: 3.00 ರವಿವಾರ ಆಗಸ್ಟ್ 25 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 182 Pages : 4 Price : 3.00 Sunday August 25 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಿಲ್ಲಾ ಮಟ್ಟದ ನಿಬಂಧ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ಏಕತಾ ಫೌಂಡೇಶನ್ ಗದಗ ವತಿಯಿಂದ 8, 9 ಮತ್ತು 10ನೇ ತರಗತಿ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಗದಗ ಜಿಲ್ಲಾ ಮಟ್ಟದ ನಿಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ವಿಷಯ ಸ್ವಾತಂತ್ರ್ಯ ದಿನದ ಮಹತ್ವ ಮತ್ತು ಪ್ರಾಮುಖ್ಯತೆ ಕುರಿತು ಇರುತ್ತದೆ.

ಸದರಿ ನಿಬಂಧ ಲೇಖನಗಳು ಕನಿಷ್ಠ 300 ಶಬ್ದಗಳಿಗಿಂತ ಕಡಿಮೆ ಇರಬೇಕು. ಸ್ಪಷ್ಟತೆ, ಶುದ್ಧ ಬರಹ, ಸುಸಂಬದ್ಧತೆ ಮತ್ತು ಭಾಷೆಯ ಬಳಕೆಗೆ ಗಮನ ನೀಡಲಾಗುವುದು. ಗದಗ ಜಿಲ್ಲಾ ವ್ಯಾಪ್ತಿ ಸ್ಪರ್ಧೆ ಮಾಡುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ತಮ್ಮ ಹೆಸರು, ಮೊಬೈಲ್ ನಂಬರನ್ನು ನಿಬಂಧ ಲೇಖನದ ಮೇಲೆ ಸ್ಪಷ್ಟವಾಗಿ ಬರೆಯಬೇಕು ಮತ್ತು ನಿಬಂಧ ಲೇಖನಗಳು ಕೈ ಬರವಣಿಗೆಯಲ್ಲಿರಬೇಕು. ಪ್ರಥಮ ರೂ. 2501, ದ್ವಿತೀಯ ರೂ. 2000, ತೃತೀಯ ರೂ. 1500 ನಗದು ಬಹುಮಾನ ಮತ್ತು ಹತ್ತು ಸಮಾಧಾನಕರ ಬಹುಮಾನಗಳನ್ನು ನೀಡಲಾಗುವುದು.

ಭಾಗವಹಿಸಿದ ಇತರರಿಗೆ ಪಡೆದ ಅಂಕಗಳನ್ನು ತಿಳಿಸಲಾಗುವುದು. ಆಸಕ್ತ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಆಗಸ್ಟ್ 31ರ ಒಳಗಾಗಿ ಪ್ರಧಾನ ಕಾರ್ಯದರ್ಶಿಗಳು–ಏಕತಾ ಫೌಂಡೇಶನ್, ಜೆ.ಪಿ. ಕಾಂಪ್ಲೆಕ್ಸ, ಶಾಪ್ ನಂ. 09 ಗದಗ 582101 ಇವರ ಹೆಸರಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ತಲುಪಿಸಬೇಕು. ವಾಟ್ಸಪ್–9916253521 ಅಥವಾ ಟಭಟಿಜಜಿಜಿ@ರಟಚುಟ.ಛಿಠಟಗೂ ಕಳುಹಿಸಬಹುದು. ಆ. 31ರ ನಂತರ ಬಂದ ನಿಬಂಧ ಲೇಖನಗಳನ್ನು ಪರಿಗಣಿಸುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.

### ಗಣೇಶೋತ್ಸವ, ಈದ್‌ಮಿಲಾದ್ ಹಬ್ಬದ ಶಾಂತಿ ಸಭೆಯಲ್ಲಿ ಎಸ್‌ಪಿ ಬಿ.ಎಸ್. ನೇಮಗೌಡ

## ಸೌಹಾರ್ದತಾ ಸಭೆಗಳು ನಡೆಯುವಂತಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಬ್ಬ–ಹರಿದಿನಗಳನ್ನು ಸಂಪ್ರದಾಯದಂತೆ ಆಚರಿಸುವದು ಮುಖ್ಯವಾಗಿದೆ. ಬರಲಿರುವ ಗಣೇಶೋತ್ಸವ ಮತ್ತು ಈದ್‌ಮಿಲಾದ್ ಹಬ್ಬಗಳನ್ನು ಶಾಂತಿ–ಸೌಹಾರ್ದತೆಯಿಂದ ನಡೆಸಿ. ಶಾಂತಿಗೆ ಭಂಗ ತರುವ ಮೂಲಕ ಪೊಲೀಸರಿಗೆ ಕೆಲಸ ನೀಡಬೇಡಿ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೂಚ್ಯವಾಗಿ ಹೇಳಿದರು.

ಅವರು ಪಟ್ಟಣದ ತಾ.ಪಂ ಸಭಾಂಗಣದಲ್ಲಿ ಶನಿವಾರ ಗಣೇಶೋತ್ಸವ ಹಾಗೂ ಈದ್‌ಮಿಲಾದ್ ಹಬ್ಬದ ಪ್ರಯುಕ್ತ ಕರೆಯಲಾಗಿದ್ದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಪ್ರತಿವರ್ಷ ಪೂರ್ವಭಾವಿ ಸಭೆ ಸೇರಿಸುವ ಸಂಪ್ರದಾಯ ಕಡಿಮೆಯಾಗಲಿ. ಅದರ ಬದಲಾಗಿ ಸೌಹಾರ್ದತಾ ಸಭೆಗಳು ನಡೆಯುವಂತಾಗಬೇಕು. ಅಂದಾಗಲೇ ಶಾಂತಿ ಎನ್ನುವ ಶಬ್ಧಕ್ಕೆ ಅರ್ಥ ಬರಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಎಲ್ಲ ಗಣೇಶ ಮಂಡಳಿಗಳವರು ಹಾಗೂ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ. ಗಣೇಶೋತ್ಸವಕ್ಕೆ ಹಾಗೂ ಈದ್ ಮಿಲಾದ್ ಹಬ್ಬಕ್ಕೆ ಆಯಾ ಪ್ರದೇಶದ




ಜನಪ್ರತಿನಿಧಿಗಳು, ಹಿರಿಯರೂ ಜವಾಬ್ದಾರಿ ವಹಿಸಬೇಕು. ಎಲ್ಲರೂ ಈ ಬಾರಿ ಗಣೇಶ ವಿಸರ್ಜನೆಯ ಸಂದರ್ಭದಲ್ಲಿ ಸಹಕಾರದಿಂದ ನಡೆದುಕೊಳ್ಳಬೇಕು. ಯಾರೇ ನಿಯಮ ಮೀರಿ ನಡೆದುಕೊಂಡಲ್ಲಿ ಕಾನೂನು ಕ್ರಮ ತೆಗೆದುಕೊಳ್ಳಲಾಗುವದು. ನಿಮ್ಮ ಆಚರಣೆಯಿಂದ ಜನರಿಗೆ ತೊಂದರೆಯಾಗದಂತೆ ಎಚ್ಚರ ವಹಿಸಿ, ಮುಂದಿನ ದಿನಗಳಲ್ಲಿ ಪಟ್ಟಣದ ಹಬ್ಬ ಆಚರಣೆಗಳ ಬಗ್ಗೆ ಮತ್ತೊಂದು ಕಡೆ ಹೊಗಳಿಕೆಯ ಮಾತುಗಳು ಬರುವಂತಾಗಲಿ ಎಂದು ಹೇಳಿದರು.


ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಡಿವೈಎಸ್‌ಪಿ ಡಿ.ಎಚ್. ಇನಾಮದಾರ, ತಾ.ಪಂ ಇಒ ಕೃಷ್ಣಪ್ಪ ಧರ್ಮರ, ಸಿಪಿಐ ನಾಗರಾಜ ಮಾಡಳ್ಳಿ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿದರು.

ಕ್ರೈಂ ವಿಭಾಗದ ಪಿಎಸ್‌ಐ ಎನ್.ಎಸ್. ಜೋಗದಂಡಕರ, ಗುರುರಾಜ ಇದ್ದರು. ಸಾರ್ವಜನಿಕರ ಪರವಾಗಿ ಪೂರ್ಣಾಜಿ ಖರಾಟೆ, ಸೋಮೇಶ ಉಪನಾಳ, ಪುರಸಭೆ ಉಪಾಧ್ಯಕ್ಷ ಫಿರ್ದೋಶ ಆಡೂರ, ಎಂ.ಎಂ. ಗದಗ, ಮುಸ್ತಾಕ್‌ಅಹ್ಮದ್ ಶಿರಹಟ್ಟಿ, ಚಂಬಣ್ಣ ಬಾಳಿಕಾಯಿ, ಗಂಗಾಧರ ಮೆಣಸಿನಕಾಯಿ, ಎಸ್. ಕೆ. ಹವಾಲ್ದಾರ, ಡಿ.ಜೆ. ಮುಚ್ಚಾಲೆ, ಶರಣು ಗೋಡಿ ಸೇರಿದಂತೆ ಅನೇಕರು ಮಾತನಾಡಿ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

ಸಭೆಯಲ್ಲಿ ಶಿವಯೋಗಿ ಅಂಕಲಕೋಟಿ, ಎಸ್.ಕೆ. ಕಣಕೆ, ಮಂಜುನಾಥ ಹೊಗೆಸೊಪ್ಪಿನ, ಮಹೇಶ ಕಲಘಟಗಿ, ಬಸವರಾಜ ಕಲ್ಲೂರ, ಬಸವರಾಜ ಹಿರೇಮನಿ, ರಾಜಣ್ಣ ಮಡಿವಾಳರ, ಝಾಕೀರ ಹವಾಲ್ದಾರ, ಅನಿಲ ಮುಳಗುಂದ, ಸದಾನಂದ ನಂದೆಣ್ಣವರ, ದಾದಾಪೀರ ತಂಬಾಕದ ಸೇರಿದಂತೆ ನೂರಾರು ಜನರು ಹಾಜರಿದ್ದರು. ಹವಾಲ್ದಾರ್ ಪ್ರಕಾಶ ಮ್ಯಾಗೇರಿ ಸ್ವಾಗತಿಸಿದರು. ಈಶ್ವರ ಮೇಡ್ಲೇರಿ ನಿರೂಪಿಸಿದರು. ಪಿಎಸ್‌ಐ ಈರಪ್ಪ ರಿತ್ತಿ ವಂದಿಸಿದರು.

> ತಹಸೀಲ್ದಾರ ವಾಸುದೇವ ಸ್ವಾಮಿ ಮಾತನಾಡಿ, ಹಬ್ಬಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿದ್ದು, ಸಂಸ್ಕೃತಿ ಮತ್ತು ಸಂಪ್ರದಾಯಗಳಿಗೆ ಧಕ್ಕೆ ಬರದಂತೆ ಹಬ್ಬಗಳನ್ನು ಆಚರಿಸುವದು ಮುಖ್ಯವಾಗಿದೆ. ಈ ಕುರಿತಂತೆ ರೂಪಿಸಲಾಗಿರುವ ನಿಯಮಗಳನ್ನು ಪಾಲಿಸುವದು ಅಗತ್ಯವಾಗಿದ್ದು, ಎಲ್ಲರೂ ಸಹಕಾರದಿಂದ, ಬಾಂಧ್ಯವ್ಯದಿಂದ ಹಬ್ಬ ಆಚರಣೆ ಮಾಡೋಣ ಎಂದು ಹೇಳಿದರು.

## 'ಶರಣ ಸಂಗಮ' ಇಂದು



ಕೊರಮ ಸಮಾಜದ ಶರಣ ಸದ್ಗುರು ಪರಮ ಪೂಜ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಆಗಸ್ಟ್ 25ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1608ನೇ ಶರಣ ಸಂಗಮದಲ್ಲಿ ಕಾಯಕಯೋಗಿ ಶರಣ ನುಲಿಯ ಚಂದಯ್ಯನವರ ಜಯಂತಿ ನಿಮಿತ್ತ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣತತ್ವ ಚಿಂತಕಿ, ಶರಣೆ ಗಿರಿಜಕ್ಕ ಧರ್ಮರಡ್ಡಿ ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿ ವಿನಂತಿಸಿದ್ದಾರೆ.

### ಗದುಗಿನಲ್ಲಿ ನದಾಫ–ಪಿಂಜಾರ ಸಮಾಜದ ಸಂಸ್ಥಾಪನಾ ದಿನ: ರಾಜ್ಯಾಧ್ಯಕ್ಷ ಎಚ್. ಜಲೀಲಸಾಬ ಮಾಹಿತಿ

## ರಾಜ್ಯಮಟ್ಟದ ಮಹಿಳಾ ಸಮಾವೇಶ ಅ. 27ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ನದಾಫ್–ಪಿಂಜಾರ ಸಂಘದ 32ನೇ ಸಂಸ್ಥಾಪನಾ ದಿನಾಚರಣೆ ಹಾಗೂ ಮಹಿಳಾ ಸಮಾವೇಶವನ್ನು ಅಕ್ಟೋಬರ್ 27ರಂದು ಈ ಬಾರಿ ಗದಗನಲ್ಲಿ ಹಮ್ಮಿಕೊಳ್ಳಲಾಗಿದ್ದು, ಅದಕ್ಕಾಗಿ ಪೂರಕ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಹೆಚ್. ಜಲೀಲಸಾಬ ಹೇಳಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಸ್ಥಾಪನಾ ದಿನಾಚರಣೆ ಹಾಗೂ ಮಹಿಳಾ ಸಮಾವೇಶದ ಸಂದರ್ಭದಲ್ಲಿ ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಗೌರವಿಸಿ ರಾಜ್ಯ ಮಟ್ಟದಲ್ಲಿ ಸನ್ಮಾನಿಸಲಾಗುವುದು ಎಂದರು.

ಸಮಾರಂಭದಲ್ಲಿ 2023–24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಯಲ್ಲಿ ಶೇ. 95ಕ್ಕಿಂತ ಹೆಚ್ಚು, ದ್ವಿತೀಯ ಪಿಯುಸಿಯಲ್ಲಿ ಶೇ.90ಕ್ಕೂ ಅಧಿಕ ಅಂಕಗಳನ್ನು ಪಡೆದ ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನಡೆಯಲಿದೆ.

ನದಾಫ/ಪಿಂಜಾರ ಸಮುದಾಯವು ರಾಜಕೀಯವಾಗಿ, ಸಾಮಾಜಿಕವಾಗಿ,



ಆರ್ಥಿಕವಾಗಿ ಹಿಂದುಳಿದಿದೆ. ಸಮಾಜದಲ್ಲೂ ಹಲವು ಸಾಧಕರಿದ್ದು, ಸರ್ಕಾರ ಅವರನ್ನು ಗುರುತಿಸುವಲ್ಲಿ ನಿರ್ಲಕ್ಷ್ಯಿಸಿದೆ. ಹೀಗಾಗಿ ಸಮಾಜದ ಸಾಧಕರನ್ನು ಗುರುತಿಸಿ, ಅವರಿಗೆ ಹಲವು ಪ್ರಶಸ್ತಿ ನೀಡಲು ತೀರ್ಮಾನಿಸಲಾಗಿದೆ.

ವಿವಿಧ ಕ್ಷೇತ್ರಗಳಲ್ಲಿ ಮತ್ತು ಕ್ರೀಡೆಗಳಲ್ಲಿ ತೊಡಗಿಸಿಕೊಂಡು, ರಾಜ್ಯ/ರಾಷ್ಟ್ರ/ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡ ಮಹನೀಯರನ್ನು ಗುರುತಿಸಿ 'ಹೆಚ್ ಇಬ್ರಾಹಿಂ', 'ಜೆ ಇಮಾಮ್' ಹಾಗೂ 'ಪಿಂಜಾರ್ ಪೈಲ್ವಾನ್ ರಮಜಾನ್ ಸಾಬ್' ರಾಜ್ಯ ಪ್ರಶಸ್ತಿ ನೀಡಿ ಸನ್ಮಾನಿಸಲಾಗುವುದು ಎಂದು ಮಾಹಿತಿ ನೀಡಿದರು.

ಭಾರತದ ಮೊಟ್ಟಮೊದಲ ಮುಸ್ಲಿಂ ಮಹಿಳಾ ಶಿಕ್ಷಕಿ ಫಾತಿಮಾ ಶೇಖ ಅವರ ಹೆಸರಿನಲ್ಲಿ ಶೈಕ್ಷಣಿಕವಾಗಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ಒಬ್ಬ ಅತ್ಯುತ್ತಮ ಮಹಿಳಾ ಶಿಕ್ಷಕಿಗೆ ಸಾಧಕರ ಶ್ರೇಣಿಯಲ್ಲಿ 'ಫಾತಿಮಾ ಶೇಖ ರಾಜ್ಯ ಪ್ರಶಸ್ತಿ', ಒಬ್ಬ ಅತ್ಯುತ್ತಮ ರೈತನಿಗೆ ಈ ವರ್ಷದಿಂದ ಗೌರವ ಪೂರ್ವಕ 'ಪ್ರಗತಿಪರ ರೈತ' ರಾಜ್ಯ ಪ್ರಶಸ್ತಿ ನೀಡಲು ಉದ್ದೇಶಿಸಿದೆ.

ಈ ಸಮಾವೇಶಕ್ಕೆ ಉದ್ಘಾಟಕರಾಗಿ ಸಚಿವ ಎಚ್.ಕೆ. ಪಾಟೀಲರನ್ನು ಆಹ್ವಾನಿಸಲಾಗುವುದು. ಜತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಸಚಿವರುಗಳಾದ ಜಮೀರ್ ಅಹ್ಮದ್ ಖಾನ್, ಸಂತೋಷ ಲಾಡ್ ಹಾಗೂ ಇತರ ಗೌರವಾನ್ವಿತ ಜನಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು ಎಂದು ವಿವರಿಸಿದರು.


ಸಮಾಜದವರಿಗೆ ಸರ್ಕಾರದ ಸೌಲಭ್ಯ ಸಿಗಲು ಈಗಾಗಲೇ ಹಿಂದಿನ ಸರ್ಕಾರ ಘೋಷಿಸಿರುವ ಅಭಿವೃದ್ಧಿ ನಿಗಮಕ್ಕೆ ಅನುದಾನ ನೀಡಬೇಕು. ಧಾರವಾಡದ ಕವಿವಿಯಲ್ಲಿ ನದಾಫ್/ಪಿಂಜಾರ ಅಧ್ಯಯನ ಪೀಠ ಆರಂಭಿಸಬೇಕೆಂದು ಇದೇ ವೇಳೆ ರಾಜ್ಯಾಧ್ಯಕ್ಷ ಎಚ್.ಜಲೀಲಸಾಬ ಸರಕಾರವನ್ನು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ನದಾಫ್/ಪಿಂಜಾರ ಸಂಘದ ಗದಗ ಜಿಲ್ಲಾಧ್ಯಕ್ಷ ಕೆ.ಎಫ್. ಹಳ್ಯಾಳ, ರಾಜ್ಯ ಉಪಾಧ್ಯಕ್ಷ ಎಂ.ಎಚ್. ಬೆಂಡಿಗೇರಿ, ರಾಜ್ಯ ಪ್ರಧಾನ ಕಾರ್ಯದರ್ಶಿ ರಿಯಾಜ್ ಸಲೀಂ ನಾಗ್ರೆ, ಖಜಾಂಚಿ ಶಾಬುದ್ದೀನ ನೂರಭಾಷಾ, ಸಂಘಟನಾ ಕಾರ್ಯದರ್ಶಿಗಳಾದ ಎಂ.ಎಂ. ಗಾಡಗೋಳಿ, ಎಸ್.ಎಚ್. ಮುದಕವಿ, ಗದಗ ವಿಭಾಗೀಯ ಉಪಾಧ್ಯಕ್ಷ ಪಿ. ಇಮಾಮಸಾಬ, ವಿಭಾಗೀಯ ಕಾರ್ಯದರ್ಶಿ ಎಚ್.ಆರ್. ನದಾಫ, ಮಹಿಳಾ ಘಟಕದ ಗದಗ ಜಿಲ್ಲಾಧ್ಯಕ್ಷೆ ತಾಜಬೀ ನದಾಫ, ಜಿಲ್ಲಾ ಕಾರ್ಯದರ್ಶಿ ಎಂ.ಬಿ. ನದಾಫ ವಕೀಲರು, ಜಿಲ್ಲಾ ಖಜಾಂಚಿ ಎಸ್.ಎಂ. ಅಣ್ಣಿಗೇರಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಐ.ಎನ್. ಹುಬ್ಬಳ್ಳಿ, ಶಿರಹಟ್ಟಿ ತಾಲ್ಲೂಕಾಧ್ಯಕ್ಷ ದಾವಲಸಾಬ ಹೆಚ್. ನದಾಫ, ಜಿಲ್ಲಾ ಸದಸ್ಯ ರಮಜಾನಸಾಬ ಹಾದಿಮನಿ ಮುಂತಾದವರಿದ್ದರು.

> ನಮ್ಮ ಮೂಲ ಉದ್ಯೋಗವಾದ ಗಾದಿ ತಯಾರಿಕೆಗೆ ಪ್ರೋತ್ಸಾಹ ನೀಡಲು ಜಿಲ್ಲೆಯಲ್ಲಿ ವಂಶ ಪಾರಂಪರಿಕವಾಗಿ ಗಾದಿ ತಯಾರಿಕೆ ವೃತ್ತಿಯಲ್ಲಿ ತೊಡಗಿರುವ ಇಬ್ಬರನ್ನು ಗುರುತಿಸಿ ವೃತ್ತಿಗೆ ಜೀವಕಳೆ ತುಂಬಲು 'ನದಾಫ್ ಪಿಂಜಾರ ಕಾಯಕ ಜೀವಿ' ಪ್ರಶಸ್ತಿ ಪ್ರದಾನ ನಡೆಯಲಿದೆ. ನಮ್ಮ ಸಮಾಜವನ್ನು ಹೊರತುಪಡಿಸಿ ಬೇರೆ ಜನಾಂಗದಲ್ಲಿ ಕೋಮು ಸೌಹಾರ್ದತೆಯಿಂದ ಸೇವೆ ಸಲ್ಲಿಸುತ್ತಿರುವ ಇಬ್ಬರು ಮಹನೀಯರನ್ನು ಗುರುತಿಸಿ 'ಭಾವೈಕ್ಯ ಪ್ರಶಸ್ತಿ' ನೀಡಿ ಪುರಸ್ಕರಿಸಲಾಗುವುದು ಎಂದರು.

### ಕೆ.ಎಚ್. ಪಾಟೀಲ ಫುಟ್‌ಬಾಲ್ ಲೀಗ್ ಸೀಸನ್–2 ಫೈನಲ್ ಹಂತಕ್ಕೆ

## 3ನೇ ಸ್ಥಾನಕ್ಕಾಗಿ ಜಿದ್ದಾಜಿದ್ದಿ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಕೆ.ಎಚ್. ಪಾಟೀಲ ಸ್ಪೋರ್ಟ್ಸ್ ಇವೆಂಟ್ಸ್ ಹಾಗೂ ಕರ್ನಾಟಕ ಸ್ಪೋರ್ಟ್ಸ್ ಆ್ಯಂಡ್ ಎಜುಕೇಶನ್ ಅಕಾಡೆಮಿ ಗದಗ ಇವರ ವತಿಯಿಂದ ನಡೆಯುತ್ತಿರುವ, ಸಚಿವ ಡಾ. ಎಚ್. ಕೆ. ಪಾಟೀಲ ಅಯೋಜಿಸಿರುವ, ಯುವಕರ ಕಣ್ಮಣಿ ಕೃಷ್ಣಗೌಡ ಪಾಟೀಲ ಹಾಗೂ ಸಚಿನ ಪಾಟೀಲ ಇವರ ಉಪಸ್ಥಿತಿಯಲ್ಲಿ ಫುಟ್‌ಬಾಲ್ ಪಂದ್ಯಾವಳಿಯು ಫೈನಲ್ ಹಂತಕ್ಕೆ ತಲುಪಿದೆ.

ಸದರಿ ಫೈನಲ್ ಪಂದ್ಯವನ್ನು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ವೀಕ್ಷಿಸಲಿದ್ದು, ಫೈನಲ್ ಪಂದ್ಯದಲ್ಲಿ ವಿಜೇತ ತಂಡ–ಕ್ಕೆ ಪ್ರಶಸ್ತಿ ನೀಡಲಿದ್ದಾರೆ ಎಂದು ಪಂದ್ಯಾವಳಿಯ ಆಯೋಜಕ ಸರ್ಫರಾಜ್ ಶೇಖ ತಿಳಿಸಿದ್ದಾರೆ.

1ನೇ ಸೆಮಿಫೈನಲ್ ಪಂದ್ಯ ಡಿಫೆಂಡರ್ಸ್–ಕಿಕರ್ಸ್ ತಂಡಗಳ ನಡುವೆ ನಡೆದು ಕಿಕ್ಕರ್ಸ್ ತಂಡ 0–2 ಗೋಲುಗಳಿಂದ ಪಂದ್ಯವನ್ನು ಗೆದ್ದು ನೇರವಾಗಿ ಫೈನಲ್‌ಗೆ ಜಿಗಿಯಿತು. ಈ ಪಂದ್ಯದಲ್ಲಿ ಕೇನಿಲ್ ಹಾಗೂ ರಾಮ್ ತಲಾ ಒಂದೊಂದು ಗೋಲುಗಳನ್ನು ಹೊಡೆದರೆ, ಶ್ರೇಷ್ಠ ಪ್ರಶಸ್ತಿಯನ್ನು ರಾಮು ಮುಂಡರಗಿ ಪಡೆದುಕೊಂಡರು.

2ನೇ ಸೆಮಿ ಫೈನಲ್ ಪಂದ್ಯ ಅವೆಂಜರ್ಸ್–ರೆಬೆಲ್ ತಂಡಗಳ ನಡುವೆ ನಡೆದು ಎರಡು ತಂಡಗಳು ಯಾವುದೇ ಗೋಲನ್ನು ಹೊಡೆಯದೆ ಪಂದ್ಯ ಡ್ರಾ ಆಯಿತು. ನಂತರ ಅಂಪೈರ್‌ಗಳ ನಿರ್ಣಯದ ಪ್ರಕಾರ ಎರಡು ತಂಡಗಳ ನಡುವೆ 14 ನಿಮಿಷ ಹೆಚ್ಚು ಸಮಯ ನೀಡಲಾಯಿತು. ಎರಡು ತಂಡಗಳು ನೇರ ಪೈಪೋಟಿ ನಡೆಸಿದರೂ ಯಾವ ತಂಡವೂ ಗೋಲನ್ನು ಹೊಡೆಯಲಿಲ್ಲ. ನಂತರ ಎರಡು ತಂಡಗಳಿಗೆ ಪೆನಾಲ್ಟಿ ನೀಡಲಾಯಿತು. ಆಗ ಅವೆಂಜರ್ಸ್ ತಂಡ 7 ಗೋಲು ಹೊಡೆದು ನೇರವಾಗಿ ಫೈನಲ್‌ಗೆ ತಲುಪಿತು. ಪಂದ್ಯ ಶ್ರೇಷ್ಠ ಪ್ರಶಸ್ತಿಯನ್ನು ಅವೆಂಜರ್ಸ್ ತಂಡದ ಅಬ್ರಾರ್ ಬಾಚಿಕೊಂಡರು.

3ನೇ ಸ್ಥಾನಕ್ಕಾಗಿ ಡಿಫೆಂಡರ್ಸ್–ರೆಬೆಲ್ ತಂಡಗಳು ರವಿವಾರ ಸೆಣೆಸಲಿವೆ.

### ಆ.27ರಂದು ಪಟ್ಟಣದಲ್ಲಿ ಅಹಿಂದ ಸಮುದಾಯದಿಂದ ಬೃಹತ್ ಪ್ರತಿಭಟನೆ

## ಸರ್ಕಾರವನ್ನು ಅಸ್ಥಿರಗೊಳಿಸಲು ಹುನ್ನಾರ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪ್ರಜಾಪ್ರಭುತ್ವದ ಸರ್ಕಾರವನ್ನು ಕಿತ್ತುಹಾಕಲು ನಡೆಸುತ್ತಿರುವ ಸಂಚನ್ನು ಖಂಡಿಸಿ ಪಟ್ಟಣದಲ್ಲಿ ಆಗಸ್ಟ್ 27ರಂದು ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಇಲ್ಲಿನ ಅಹಿಂದ ಸಮುದಾಯದ ಮುಖಂಡರು ಹೇಳಿದರು.



ಪಟ್ಟಣದ ರೋಣ ರಸ್ತೆಯ ಪ್ರವಾಸಿ ಮಂದಿರದಲ್ಲಿ ಶನಿವಾರ ತಾಲೂಕು ಅಹಿಂದ ಸಮುದಾಯದ ವತಿಯಿಂದ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖಂಡರು, ರಾಜ್ಯದ ಜನಸಾಮಾನ್ಯರು, ಬಡವರು, ಶೋಷಿತ ಹಾಗೂ ಹಿಂದುಳಿದ ವರ್ಗಗಳ ಪರವಾಗಿ 2ನೇ ಅವಧಿಗೆ ಮುಖ್ಯಮಂತ್ರಿಯಾಗಿ ಅಧಿಕಾರ ನಡೆಸುತ್ತಿರುವ ಸಿದ್ದರಾಮಯ್ಯ ಅಹಿಂದ ವರ್ಗದ ನೇತಾರರಾಗಿದ್ದಾರೆ. ಸಿಎಂ ಸಿದ್ದರಾಮಯ್ಯರ ಜನಪ್ರಿಯತೆ ಹಾಗೂ ಅವರ ಆಡಳಿತದಲ್ಲಿನ ಜನಪರ ಕಾಳಜಿಯನ್ನು ಸಹಿಸಲಾಗದ ಕೇಂದ್ರ ಸರ್ಕಾರವು ರಾಜ್ಯಪಾಲರ ಮೂಲಕ ಸಿಎಂ ಸಿದ್ದರಾಮಯ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು.

ರಾಜ್ಯದ ಜನರ ಸರ್ವಾಂಗೀಣ ಏಳ್ಗೆಗಾಗಿ ಉಚಿತ ಬಸ್ ಪ್ರಯಾಣ, ಮನೆಗಳಿಗೆ ಉಚಿತ ವಿದ್ಯುತ್, ನಿರುದ್ಯೋಗಿಗಳಿಗೆ ವೇತನ, ಅನ್ನಭಾಗ್ಯ ಯೋಜನೆಯ ಮೂಲಕ ಜನರ ಹಸಿವು ನೀಗಿಸುತ್ತಿರುವ ಸಿಎಂ ಸಿದ್ದರಾಮಯ್ಯ ದಕ್ಷ ಹಾಗೂ ಪ್ರಾಮಾಣಿಕ ಆಡಳಿತಗಾರರು. ಜನಪರ, ರೈತಪರ ಆಡಳಿತವನ್ನು ನೀಡುತ್ತಾ ಜನರ ಮನಸ್ಸು ಗೆದ್ದಿರುವ ಸಿದ್ದರಾಮಯ್ಯ ಅವರ ಸರ್ಕಾರವನ್ನು ಉರಳಿಸಲು ಬಿಜೆಪಿ ಹಾಗೂ ಜೆಡಿಎಸ್ ನಾಯಕರ ಸುಳ್ಳು ಆರೋಪಗಳಿಗೆ ಕೇಂದ್ರ ಸರ್ಕಾರ ಕಿವಿಗೊಟ್ಟಿದೆ ಎಂದರು.

ಈ ಸಂದರ್ಭದಲ್ಲಿ ವಿ.ಆರ್. ಗುಡಿಸಾಗರ, ಅಶೋಕ ಬಾಗವಾರ, ಎಚ್.ಎಸ್. ಸೋಂಪುರ, ಶರಣು ಪೂಜಾರ, ರವಿ ಗಡೇದವರ, ಸುಭಾನಸಾಬ ಆರಗಿದ್ದಿ, ಪ್ರಶಾಂತ ರಾಠೋಡ, ಕೆ.ಎಸ್. ಕೊಡತಗೇರಿ, ರಾಜು ಸಾಂಗ್ಲೀಕರ, ವೆಂಕಟೇಶ ಮುದಗಲ್, ಎಫ್.ಎಸ್. ಕರಿದುರಗನವರ, ಅಜ್ಜಪ್ಪ ವಂದಕುದರಿ ಸೇರಿ ಇತರರು ಇದ್ದರು.

> ರಾಜ್ಯಪಾಲರ ಮೂಲಕ ಸಿದ್ದರಾಮಯ್ಯ ಅವರಿಗೆ ಅನಗತ್ಯ ತೊಂದರೆ ನೀಡುತ್ತಿರುವುದನ್ನು ಗಜೇಂದ್ರಗಡ ತಾಲೂಕು ಅಲ್ಪಸಂಖ್ಯಾತ, ಹಿಂದುಳಿದ, ದಲಿತ ಸಮುದಾಯಗಳು ಹಾಗೂ ಪ್ರಗತಿಪರರು ತೀವ್ರವಾಗಿ ಖಂಡಿಸುತ್ತೇವೆ. ರಾಜ್ಯಪಾಲರ ಈ ನಡೆಯನ್ನು ವಿರೋಧಿಸಿ ತಾಲೂಕಾ ಅಹಿಂದ ಸಮುದಾಯದಿಂದ ಆ.27ರ ಬೆಳಿಗ್ಗೆ 9.30ಕ್ಕೆ ಇಲ್ಲಿನ ಎಪಿಎಂಸಿ ಆವರಣದಿಂದ ದುರ್ಗಾ ವೃತ್ತದವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ, ಕಾಲಕಾಲೇಶ್ವರ ವೃತ್ತದಲ್ಲಿ ಬಹಿರಂಗ ಸಭೆ ನಡೆಸಲಾಗುವುದು. ಈ ಹೋರಾಟಕ್ಕೆ ಪ್ರಗತಿಪರ, ದಲಿತಪರ, ಕನ್ನಡಪರ, ರೈತಪರವಿರುವ ಎಲ್ಲಾ ಪ್ರಜ್ಞಾವಂತ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

## ಸಂಪಾದಕೀಯ

# ಅಂದು ವಿರೋಧ ಇಂದು ಸಮ್ಮತಿ

ಜಿಂದಾಲ್ ಉಕ್ಕು ಕಂಪನಿಗೆ 3677 ಎಕರೆ ಭೂಮಿ ಪರಭಾರೆ ಮಾಡುವುದನ್ನು ವಿರೋಧಿಸಿ ಕಾಂಗ್ರೆಸ್ ಅಂದು ಪ್ರತಿಭಟನೆಯ ಹಾದಿ ಹಿಡಿದಿತ್ತು. ಬಿಜೆಪಿ ನಡೆಯನ್ನ ವ್ಯಾಪಕವಾಗಿ ಟೀಕಿಸಿ ಭೂಮಿ ಪರಭಾರೆ ಆಗುವುದನ್ನು ತಪ್ಪಿಸಲು ಕಾರಣವಾಗಿತ್ತು.

ಆದರೆ ಇಂದು ಅಧಿಕಾರದಲ್ಲಿರುವ ಕಾಂಗ್ರೆಸ್ ಜಿಂದಾಲ್ ಕಂಪನಿಗೆ ಅತೀ ಕಡಿಮೆ ದರದಲ್ಲಿ ಸಾವಿರಾರು ಎಕರೆ ಭೂಮಿಯನ್ನ ಕೊಡಲು ಮುಂದಾಗಿದೆ. ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾತ್ರದ ಬಗ್ಗೆ ಚರ್ಚೆ ನಡೆಯುತ್ತಿರುವ ಬೆನ್ನಲ್ಲೇ, ಜಿಂದಾಲ್ ಕಂಪನಿಗೆ ಸಾವಿರಾರು ಕೋಟಿ ಬೆಲೆಬಾಳುವ ಸಾವಿರಾರು ಎಕರೆ ಜಮೀನು ಕೊಡಲು ಮುಂದಾಗಿರುವುದು ಪ್ರಜ್ಞಾವಂತರ ಆಕ್ರೋಶಕ್ಕೆ ಕಾರಣವಾಗಿದೆ.

ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಪಾತ್ರ ಏನು ಎನ್ನುವುದರ ಕುರಿತು ಇನ್ನು ತನಿಖೆ ಆಗಬೇಕಿದೆ. ಆದರೆ ಜಿಂದಾಲ್ ಗೆ ಭೂಮಿ ನೀಡುವ ವಿಷಯವಾಗಿ ಸಿದ್ದರಾಮಯ್ಯ ತಪ್ಪು ಮಾಡಿರುವುದು ಅತ್ಯಂತ ಸ್ಪಷ್ಟವಾಗಿದೆ.

ಸಚಿವ ಸಂಪುಟದ ಸಭೆಯಲ್ಲಿ ಜಿಂದಾಲ್ ಕಂಪನಿಗೆ ಭೂಮಿ ನೀಡುವ ನಿರ್ಣಯ ಕೈಗೊಂಡಿರುವುದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಪ್ಪು ಎನಿಸಿಲ್ಲವೇ?

ಮುಖ್ಯಮಂತ್ರಿ ಸಿದ್ದರಾಮಯ್ಯ ಈಗ ಯಾವ ಒತ್ತಡಕ್ಕೆ ಮಣಿದು ಇದಕ್ಕೆ ಅಂಕಿತ ಹಾಕಿದ್ದಾರೆ ಎನ್ನುವುದನ್ನು ಅವರೇ ಸ್ಪಷ್ಟಪಡಿಸಬೇಕಿದೆ. ಸಾವಿರಾರು ಎಕರೆ ಭೂಮಿಯನ್ನ ಅತ್ಯಲ್ಪ ಬೆಲೆಗೆ ಕೊಡುವಂತಹ ನಿರ್ಣಯ ಒಪ್ಪುವಂತಹದ್ದಲ್ಲ.

ಕಾಂಗ್ರೆಸ್ ಈ ಹಿಂದಿನ ತನ್ನ ನಿರ್ಣಯಕ್ಕೆ ಬದ್ಧವಾಗಿ ನಡೆದುಕೊಳ್ಳದಿದ್ದರೆ ಜನಾಕ್ರೋಶಕ್ಕೆ ತುತ್ತಾಗಬೇಕಾಗುತ್ತದೆ. ಪ್ರತಿಪಕ್ಷಗಳ ಟೀಕೆ ಟಿಪ್ಪಣಿ ಇನ್ನಷ್ಟು ಹೆಚ್ಚಾಗಿ ಸರಕಾರ ಕೆಟ್ಟ ಹೆಸರು ತಂದುಕೊಳ್ಳಬೇಕಾಗುತ್ತದೆ.


## ತ್ರಿಪುರಾ ಭಾರಿ ಪ್ರವಾಹ: 125 ಜನರನ್ನು ರಕ್ಷಿಸಿದ ಎನ್‌ಡಿಆರ್‌ಎಫ್, ಸಾವಿನ ಸಂಖ್ಯೆ 24 ಕ್ಕೆ ಏರಿಕೆ

■ವಿಜಯಸಾಕ್ಷಿ ಸುದ್ದಿ, ತ್ರಿಪುರಾ

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್‌ಡಿಆರ್‌ಎಫ್) ರಕ್ಷಣಾ ತಂಡ ಶುಕ್ರವಾರ ಸಂಜೆ ಕಾರ್ಯಾಚರಣೆಯಲ್ಲಿ ಈಶಾನ್ಯ ರಾಜ್ಯವಾದ ತ್ರಿಪುರದ ಅನೇಕ ಪ್ರವಾಹ ಪೀಡಿತ ಭಾಗಗಳಿಂದ 125 ಜನರನ್ನು ಸ್ಥಳಾಂತರಿಸಿದೆ. ತ್ರಿಪುರಾದಾದ್ಯಂತ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳನ್ನು ಕೈಗೊಳ್ಳಲು ಎನ್‌ಡಿಆರ್‌ಎಫ್‌ನ ಹನ್ನೊಂದು ತಂಡಗಳನ್ನು ನಿಯೋಜಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆದರೆ, ಸಾವಿನ ಸಂಖ್ಯೆ 24 ಕ್ಕೆ ಏರಿದೆ.

## ಶ್ರಾವಣ ಮಾಸದ ಮಹತ್ವ, ಆಚರಣೆಗಳ ಕುರಿತ ವಿಶೇಷ ಲೇಖನ

# ಮಾಸಗಳ ರಾಜ ಶ್ರಾವಣ



ನನಗಂತೂ ಮಾಸಗಳಲ್ಲಿಯೇ ಈ ಶ್ರಾವಣ ಮಾಸ ಅಂದರೆ ತುಂಬಾ ಹುರುಪು. ಈ ಮಾಸ ಹೆಚ್ಚು ವಿಶೇಷವಾಗಿದ್ದು, ಮುಂಗಾರು ಮಳೆಯ ಆರಂಭದೊಂದಿಗೆ ತಿಂಗಳು ಪೂರ್ತಿ ಶುದ್ಧ ಮನಸ್ಥಿತಿಯಿಂದ, ಪ್ರೀತಿ-ಶ್ರದ್ಧೆಯಿಂದ ತುಂಬಿದ ಪೂಜೆ-ಹವನಗಳು, ಹಬ್ಬಗಳಿಂದ ತುಂಬಿದ ಮನೆ ಮನಗಳು. ಜಪ-ತಪ, ವೃತ-ನಿಯಮ, ಪೂಜಾನುಷ್ಠಾನ ಈ ಮಾಸದಲ್ಲಿ ಹೆಚ್ಚಾಗಿದ್ದು, ಹಿಂದೂ ಸಂಪ್ರದಾಯದ ಪರಿಪಾಲಕರಿಗೆ ಈ ಮಾಸ ಅತ್ಯಂತ ಉತ್ಸಾಹ ನೀಡುವುದರ ಜೊತೆಗೆ ಭಕ್ತಿಯಲ್ಲಿ ಲೀನವಾಗುವಂತೆ ಮಾಡಿಬಿಡುತ್ತದೆ.

ಋತುಗಳ ರಾಜ ವಸಂತವಾದರೆ, ಮಾಸಗಳ ರಾಜ ಶ್ರಾವಣ ಅಂದರೆ ತಪ್ಪಾಗಲಾರದು. ದಂತಕತೆಗಳ ಪ್ರಕಾರ ಈ ಶ್ರಾವಣ ಮಾಸ ಶಿವನು ವಿಷವನ್ನು ನುಂಗಿ ಜಗತ್ತನ್ನು ಉಳಿಸಿದ ಪವಿತ್ರವಾದ ಸಮಯವಾಗಿದೆ. ಈ ಮಾಸದಲ್ಲಿ ಅನೇಕಾನೇಕ ಹಬ್ಬಗಳು, ಶ್ರೀಕ್ಷೇತ್ರಗಳ ಯಾತ್ರೆಗಳು ಏರ್ಪಡುವುದರಿಂದ ಸದಾ ಚಟುವಟಿಕೆಯಿಂದ ಇರುವುದರ ಜೊತೆಗೆ ಆಹಾರದಲ್ಲಿ ವೈವಿಧ್ಯತೆಯನ್ನು ತುಸು ಹೆಚ್ಚಾಗಿಯೇ ಕಾಣಬಹುದಾಗಿದೆ. ಇಂತಹ ವೈವಿಧ್ಯಮಯ ಆಹಾರವು ದೇಹವನ್ನು ಶುದ್ಧೀಕರಿಸಲು ಸಹಕಾರಿಯಾದರೆ, ಹಬ್ಬಗಳ ಆಚರಣೆಗಳು ನಮ್ಮ ಪೂರ್ವಜರು ನಮಗೆ ಬಿಟ್ಟು ಹೋದ ಅನೇಕ ಪದ್ಧತಿಗಳನ್ನು ಪುನಃ ಜ್ಞಾಪಿಸಿಕೊಳ್ಳುವಂತೆ ಮಾಡುವ ಮೂಲಕ ಶ್ರಾವಣ ಮಾಸ ಅತ್ಯಂತ ಅರ್ಥಪೂರ್ಣ ಎನ್ನಿಸುತ್ತದೆ.

ಆಹಾರದಲ್ಲಿ ಇತಿ-ಮಿತಿ, ಇಂದ್ರಿಯಗಳಲ್ಲಿನ ಅತಿಯಾದ ಭೋಗವನ್ನು ನಿಯಂತ್ರಿಸುವ ಮೂಲಕ ದೇಹ ಹಾಗೂ ಮನಸ್ಸನ್ನು ಪಾವಿತ್ರ್ಯತೆಯಿಂದ ಇಡುವಂತಹದ್ದು ಈ ಮಾಸದ ಪ್ರಮುಖ ಉದ್ದೇಶ. ಸದಾ ಬ್ಯುಸಿ ಶೆಡ್ಯೂಲ್ ಮೂಲಕ ಯಾಂತ್ರಿಕ ಜೀವನವನ್ನು ನಡೆಸುತ್ತಿರುವ ಈಗಿನ ಜನತೆ ಈ ಮಾಸದಲ್ಲಿ ಮಂತ್ರಗಳನ್ನು ಪಠಿಸುತ್ತಾ, ಶ್ರೀಕ್ಷೇತ್ರಗಳ ಯಾತ್ರೆಗಳನ್ನು ಕೈಗೊಳ್ಳುತ್ತಾ, ಧರ್ಮಗ್ರಂಥಗಳನ್ನು ಓದುತ್ತಾ, ಉಪವಾಸಗಳನ್ನು ಕೈಗೊಳ್ಳುತ್ತಾ ತಮ್ಮ ದಿನಚರಿಯ ವೇಳಾಪಟ್ಟಿಯಲ್ಲಿ ತುಸು ಬದಲಾವಣೆಯನ್ನು ಹೊಂದುವ ಮೂಲಕ ಪ್ರಕೃತಿಗೆ ಅನುಗುಣವಾಗಿ ಉತ್ತಮ ಜೀವನಕ್ಕೆ ದಾರಿ ಕಂಡುಕೊಳ್ಳಬಹುದಾಗಿದೆ.

ಶ್ರಾವಣ ಮಾಸ ಮನಸ್ಸನ್ನು ಶಾಂತಗೊಳಿಸುವ ಮೂಲಕ ಆಧ್ಯಾತ್ಮಿಕತೆ ತುಂಬಿದ ಮನಸ್ಸಿನಲ್ಲಿ ಸದಾ ಒಳ್ಳೆಯ ವಿಚಾರಗಳ ಜೊತೆಗೆ, ಧಾನ ಧರ್ಮಗಳನ್ನು ಹೆಚ್ಚಿಸುವಲ್ಲಿ ಶ್ರೇಷ್ಠ ತಿಂಗಳಾಗಿದೆ ಅಂದರೆ ತಪ್ಪಾಗಲಾರದು. ಆದರೆ ಪ್ರಸ್ತುತ ಈ ಶ್ರಾವಣ ಮಾಸದ ಪಾವಿತ್ರ್ಯತೆಯನ್ನು ಕಾಯ್ದುಕೊಂಡು ಹೋಗುವವರ ಸಂಖ್ಯೆ ತುಂಬಾ ಕಡಿಮೆಯಾಗುತ್ತಿರುವುದು ವಿಪರ್ಯಾಸ. ಆಹಾರ ಪದ್ಧತಿಯಲ್ಲಿ ಇತಿ-ಮಿತಿ ಕಾಯ್ದುಕೊಂಡು ಆಧ್ಯಾತ್ಮಿಕತೆಗೆ ಒಲವು ತೋರಿಸುವಲ್ಲಿ ತೀರಾ ತಾತ್ಸಾರ ತೋರುವವರೇ ಹೆಚ್ಚಾಗಿದ್ದು ಆಚರಣೆ, ಪದ್ಧತಿ ಇವುಗಳನ್ನು ಮೂಲೆ ಗುಂಪು ಮಾಡುತ್ತಿರುವುದು ಎಷ್ಟು ಸರಿ?

ನಮ್ಮ ಈ ಆಚರಣೆ, ಪದ್ಧತಿಗಳು ನಮ್ಮ ಬದುಕನ್ನು ಹಸನಾಗಿಸಲು ಸಹಾಯವಾದರೆ, ಮುಂದಿನ ಪೀಳಿಗೆಗೆ ಈ ಪದ್ಧತಿ, ಆಚರಣೆಗಳು ನಾವು ನೀಡುವ ಕೊಡುಗೆಯಾಗಿರುತ್ತದೆ ಎಂಬ ಭಾವನೆ ಎಲ್ಲರಲ್ಲಿಯೂ ಮೂಡಲಿ.



**- ಟಿ.ಎ. ಹೊಂಬಳ. ವಕೀಲರು, ಹುಬ್ಬಳ್ಳಿ.**

# ಶಿಕ್ಷಕರ ವೃತ್ತಿ ಅತ್ಯಂತ ಶ್ರೇಷ್ಠ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶಿಕ್ಷಕರ ವೃತ್ತಿ ಎಲ್ಲಾ ವೃತ್ತಿಗಿಂತ ಅತ್ಯಂತ ಶ್ರೇಷ್ಠವಾದ ಹುದ್ದೆ ಎಂದು ಎಂಕೆಬಿಎಸ್ ಶಾಲೆಯ ಪ್ರಧಾನ ಗುರು ಪಿ.ಬಿ. ಕೆಂನಗೌಡರ ಹೇಳಿದರು.



ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ 1ರಲ್ಲಿ ಸರಕಾರಿ ಪ್ರೌಢಶಾಲೆಯ ಪ್ರಧಾನ ಗುರು ಆರ್.ಬಿ. ಡಂಬಳರ ಬೀಳ್ಕೊಡುಗೆ ಸಮಾರಂಭದಲ್ಲಿ ಅವರನ್ನು ಸನ್ಮಾನಿಸಿ ಮಾತನಾಡಿ, ಆರ್.ಬಿ. ಡಂಬಳ 11 ವರ್ಷಗಳ ಕಾಲ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಹಗಲು ರಾತ್ರಿ ತಮ್ಮ ಸೇವೆಯನ್ನು ಅತ್ಯಂತ ನಿಷ್ಠೆ, ಶ್ರದ್ಧೆ, ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸಿದ್ದು, ಅವರ ಸೇವೆ ನಮಗೆಲ್ಲರಿಗೂ ಮಾದರಿಯಾಗಿದೆ ಎಂದರು.

ಆರ್.ಬಿ. ಡಂಬಳ ಸನ್ಮಾನ ಸ್ವೀಕರಿಸಿ ಮಾತನಾಡಿ, ದೇಶವು ಅಭಿವೃದ್ಧಿ ಹೊಂದಲು ಪ್ರತಿಯೊಬ್ಬರೂ ಶಿಕ್ಷಣವಂತರಾಗಬೇಕು. ಆ ನಿಟ್ಟಿನಲ್ಲಿ ಪ್ರತಿಯೊಬ್ಬ ಶಿಕ್ಷಕರು ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಕಾಯಕ ಮಾಡಿದಲ್ಲಿ ದೇಶವು ಶಿಕ್ಷಣವಂತ ದೇಶವಾಗಿ ಮುಂದುವರೆಯಲು ಸಹಕಾರಿಯಾಗುತ್ತದೆ. ಎಲ್ಲರೂ ಗುರುಗಳು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಿದಾಗ, ಆ ಗುರುಗಳಿಗೆ ಗೌರವ ದೊರೆತಂತೆ ಆಗುತ್ತದೆ ಎಂದರು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ ವಹಿಸಿದ್ದರು. ಶರಣು ಪೂಜಾರ, ಎಲ್.ಬಿ. ರಾಠೋಡ, ಎಂ.ಎಂ. ಮೇಗಲಮನಿ, ಎಂ.ಎಂ. ಕೊಪ್ಪಳ, ಕೆ.ಎಂ. ಹೆರಕಲ್ಲ, ಎಚ್.ಆರ್. ಭಜೆಂತ್ರಿ, ಎಸ್.ಎಚ್. ಉಪ್ಪಾರ, ವಿ.ಎಂ. ಕಂಠಿ, ವಿ.ಎಸ್. ಹಿರೇಮಠ, ಎಸ್.ಡಿ. ಪಂಡಿತ, ಟಿ.ವೀಣಾ, ನಂದಾ ಮಟ್ಟಿ, ಜ್ಯೋತಿ ಜಾಧಾವ, ಪವಿತ್ರಾ ಮಟ್ಟಿ, ಶಭಾನಾ ಡಾಲಾಯತ ಇದ್ದರು.

## ಕೇಬಲ್ ಆಪರೇಟರ್ ಸಂಘದ ಪದಾಧಿಕಾರಿಗಳ ಆಯ್ಕೆ






■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಾ ಟಿ.ವಿ ಕೇಬಲ್ ಆಪರೇಟರ್ ಸಂಘದ ನೂತನ ಪದಾಧಿಕಾರಿಗಳನ್ನು ಎಲ್ಲಾ ಆಪರೇಟರ್‌ಗಳ ಸಮ್ಮುಖದಲ್ಲಿ ಆಯ್ಕೆ ಮಾಡಲಾಯಿತು. ನೂತನ ಅಧ್ಯಕ್ಷರಾಗಿ ಮುಂಡರಗಿ ನಗರದ ಗಣೇಶ ಸಣ್ಣಪ್ಪ ಹಾತಲಗೇರಿ, ಬಾಗೇವಾಡಿ ಗ್ರಾಮದ ಮರ್ದಾನಸಾಬ್ ಡಂಬಳ ಇವರನ್ನು ಉಪಾಧ್ಯಕ್ಷರನ್ನಾಗಿ, ತಾಲೂಕಿನ ಬಿಡನಾಳ ಗ್ರಾಮದ ಬಸನಗೌಡ ಪಾಟೀಲ್ ಇವರನ್ನು ಕಾರ್ಯದರ್ಶಿಯನ್ನಾಗಿ, ಕಲಕೇರಿ ಗ್ರಾಮದ ಕೃಷ್ಣ ಬನ್ನಿಕೊಪ್ಪ ಇವರನ್ನು ಸಂಘಟನಾ ಕಾರ್ಯದರ್ಶಿಯಾಗಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಸಿ.ಎಂ. ಹಿರೇಮಠ, ಮಂಜುನಾಥ ದೊಡಮನಿ, ಎಂ.ಬಿ. ತಾಂಬೋಟಿ, ಶರಣಯ್ಯ ಹಿರೇಮಠ, ಹುಸೇನ್‌ಸಾಬ್ ಹೊಸಮನಿ, ಚನ್ನಪ್ಪ ಚಿಕ್ಕನ್‌ಕೊಪ್ಪ, ಶಂಕರ್ ಹಲವಾಗಲಿ, ಮಲ್ಲಣ್ಣ ಕುಕನೂರ್, ಮಾಬುಸಾಬ ಹರ್ಲಾಪುರ, ಬೀರಪ್ಪ ಮ್ಯಾಗೇರಿ, ಪ್ರಶಾಂತ ಪುರದ, ಗೋಪಿ ಮೇಸ್ತ್ರಿ ಇತರರು ಉಪಸ್ಥಿತರಿದ್ದರು.

## ಅಸಂಘಟಿತ ವಲಯಕ್ಕೆ ಛಾಯಾಚಿತ್ರ ಕಲಾವಿದರು: ಸ್ವಾಗತಾರ್ಹ

■ವಿಜಯಸಾಕ್ಷಿ ಸುದ್ದಿ, ಗದಗ




ಬಡವರ ಬಂಧು ಸಿಎಂ ಸಿದ್ಧರಾಮಯ್ಯನವರ ಸರ್ಕಾರ ಛಾಯಾಗ್ರಹಕ ವೃತ್ತಿ ಕಲಾವಿದರನ್ನು ಅಸಂಘಟಿತ ವಲಯಕ್ಕೆ ಸೇರ್ಪಡೆ ಮಾಡಿರುವ ನಿರ್ಧಾರವನ್ನು ಗದಗ ಜಿಲ್ಲಾ ಛಾಯಾಗ್ರಾಹಕರ ಕ್ಷೇಮಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸಂಘದ ಮಾಜಿ ಅಧ್ಯಕ್ಷ ಚನ್ನಪ್ಪ ಫ.ಬ್ಯಾಹಟ್ಟಿ ಹಾಗೂ ಗದಗ ಜಿಲ್ಲಾ ಛಾಯಾಗ್ರಹಕರು ಸ್ವಾಗತಿಸಿದ್ದಾರೆ.

ಈ ಮೊದಲು ಛಾಯಾಗ್ರಾಹಕರನ್ನೂ ಅಸಂಘಟಿತ ವಲಯಕ್ಕೆ ಸೇರಿಸಬೇಕು ಹಾಗೂ ಅವರಿಗೂ ಸೌಲಭ್ಯಗಳು ಸಿಗಬೇಕೆಂದು ಹೋರಾಟ ಮಾಡಿ ಗದಗ ಜಿಲ್ಲಾಧಿಕಾರಿಗಳಿಗೆ ಮನವಿಯನ್ನು ಸಲ್ಲಿಸಲಾಗಿತ್ತು. ಈಗ ಹೋರಾಟಕ್ಕೆ ಪ್ರತಿಫಲ ಸಿಕ್ಕಂತಾಗಿದ್ದು, ಬಹು ವರ್ಷದ ಬೇಡಿಕೆಯಾದ ನಮ್ಮ ಸಮಸ್ಯೆಗೆ ಸ್ಪಂದಿಸಿದ ಸಿಎಂ ಸಿದ್ದರಾಮಯ್ಯ, ರಾಜ್ಯ, ಕಾರ್ಮಿಕ ಸಚಿವ ಸಂತೋಷ್ ಲಾಡ್ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಗೆ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಶಿಕ್ಷಣ ಪ್ರೇಮಿ, ತ್ಯಾಗಜೀವಿ, ನಿವೃತ್ತ ಮುಖ್ಯೋಪಾಧ್ಯಾಯ, ಶಿಕ್ಷಣ ಚಿಂತಕರಾಗಿದ್ದ ದಿ. ಬಿ.ಜಿ. ಅಣ್ಣಿಗೇರಿ ಗುರುಗಳ 5ನೇ ಪುಣ್ಯಸ್ಮರಣೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸುವ ಕುರಿತು ಚರ್ಚಿಸಲು ಆ. 25ರಂದು ಮುಂಜಾನೆ 11 ಗಂಟೆಗೆ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

ಬಿ.ಜಿ. ಅಣ್ಣಿಗೇರಿ ಗುರುಗಳ ಶಿಷ್ಯರು, ಎಲ್ಲ ಬ್ಯಾಚ್‌ನ ಹಳೆಯ ವಿದ್ಯಾರ್ಥಿಗಳು ಆಗಮಿಸಿ ಸಲಹೆ-ಸೂಚನೆ ನೀಡಬೇಕೆಂದು ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ವಿನಂತಿಸಿದ್ದಾರೆ.

## 'ವಚನ ಶ್ರಾವಣ' ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ವಚನ ಶ್ರಾವಣ-2024ರ 22ನೇ ದಿನದ ಕಾರ್ಯಕ್ರಮವು ಆಗಸ್ಟ್ 25ರ ಸಂಜೆ 5.30ಕ್ಕೆ ಗದಗ ತಾಲೂಕ ಹೊಂಬಳ ಗ್ರಾಮದ ಶ್ರೀ ಹೊನ್ನಕೇರಿ ಮಲ್ಲಿಕಾರ್ಜುನ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶರಣ ಬಸವರಾಜಪ್ಪ ಎಸ್. ರೋಣದ ವಹಿಸುವರು. ವಚನ ಚಿಂತನೆಯನ್ನು ಸರಕಾರಿ ಪ್ರಥಮದರ್ಜೆ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ರಮೇಶ ಎಂ.ಕಲ್ಲನಗೌಡ್ರ ಮಾಡುವರು.

ಬಸವದಳ, ಬಸವಕೇಂದ್ರ ಹಾಗೂ ಲಿಂಗಾಯತ ಪ್ರಗತಿಶೀಲ ಸಂಘ, ಗದಗ ತಾಲೂಕಾ ಶರಣ ಸಾಹಿತ್ಯ ಪರಿಷತ್ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

# ಜಾನಪದ ಸಾಂಸ್ಕೃತಿಕ ಹಬ್ಬ ನಾಳೆ

■ವಿಜಯಸಾಕ್ಷಿ ಸುದ್ದಿ, ಕುಕನೂರು

ಇಲ್ಲಿಯ ಕನ್ನಡ ಸಾಹಿತ್ಯ ಸಂಸ್ಕೃತಿ ಅಭಿವೃದ್ಧಿ ಟ್ರಸ್ಟ್ ವತಿಯಿಂದ ವಿಶ್ವ ಜಾನಪದ ದಿನಾಚರಣೆ ಅಂಗವಾಗಿ 10ನೇ ಜಾನಪದ ಯುವ ಸಾಂಸ್ಕೃತಿಕ ಹಬ್ಬ, ಹಾಡು, ಮಾತು-ಮಂಥನ ಕಾರ್ಯಕ್ರಮ ಆಗಸ್ಟ್ 26ರಂದು ಮುಂಜಾನೆ 11.30ಕ್ಕೆ ಕುಕನೂರಿನ ಸರಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ಜರುಗಲಿದೆ.

ತತ್ವಪದಕಾರರು ಹಾಗೂ ಸಾಹಿತಿ ಆರ್.ಪಿ. ರಾಜೂರು ಕಾರ್ಯಕ್ರಮಕ್ಕೆ ಚಾಲನೆ ನೀಡುವರು.ಪ್ರಾಚಾರ್ಯ ಈಶಪ್ಪ ಮಳಗಿ ಅಧ್ಯಕ್ಷತೆ ವಹಿಸುವರು. ಕೆ.ಎಲ್.ಇ ಕಾಲೇಜಿನ ಉಪನ್ಯಾಸಕ ಶರಣಪ್ಪ ಉಮಚಗಿ ಉಪನ್ಯಾಸ ನೀಡುವರು. ಪಟ್ಟಣ ಪಂಚಾಯತ್ ಸದಸ್ಯ ನೂರ ಅಹ್ಮದ್ ಗುಡಿಹಿಂದಲ್ ಪ್ರಶಸ್ತಿ ವಿತರಣೆ ಮಾಡುವರು. ಮುಖ್ಯ ಅತಿಥಿಗಳಾಗಿ ಶ್ರೀನಿವಾಸ್ ದೇಸಾಯಿ, ಸಿದ್ದಪ್ಪ ಬಗರಿಕರ, ಸಿದ್ಧಲಿಂಗಯ್ಯ ಹಿರೇಮಠ, ಮಂಜುನಾಥ ಕುದರಿಮನಿ ಭಾಗವಹಿಸಲಿದ್ದಾರೆ.

ನಂತರ ಗಾಯಕರಾದ ಮೇಘರಾಜ ಎಸ್.ಜಿಡಗಿ, ಗೋವಿಂದ ಭಜಂತ್ರಿ, ಮುದುಕಪ್ಪ ಅಣ್ಣಿಗೇರಿ, ಮುರಾರಿ ಭಜಂತ್ರಿ ಹಾಗೂ ಸ್ಥಳೀಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳ ವೈವಿಧ್ಯ ನಡೆಯಲಿವೆ. ಮಂಜುನಾಥ್ ಅಂಗಡಿ ಹಾಗೂ ಕನಕರಾಯ ಭಜಂತ್ರಿ ನಿರೂಪಿಸಲಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷ ರುದ್ರಪ್ಪ ಭಂಡಾರಿ ತಿಳಿಸಿದ್ದಾರೆ.

# ಸಿ.ಸಿ ರಸ್ತೆಗೆ ಭೂಮಿ ಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವಾರ್ಡ್ ನಂ.4ರಲ್ಲಿ ಸಿ.ಸಿ. ರಸ್ತೆ ನಿರ್ಮಾಣದ ಭೂಮಿ ಪೂಜೆಯನ್ನು ವಾರ್ಡ್ ಸದಸ್ಯೆ ಶಕುಂತಲಾ ಅಕ್ಕಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಯುವನಾಯಕರಾದ ಕೃಷ್ಣಗೌಡ ಪಾಟೀಲ್, ಯುವ ಮುಖಂಡರಾದ ಅಶೋಕ್ ಮಂದಾಲಿ, ಸೂರಜ್ ಸಿಂಗ್ ಜಮಾದಾರ್, ವೀರೇಂದ್ರಸಿಂಗ್ ಎಸ್.ರಜಪೂತ, ಗಣೇಶನ್ ಸಿಂಗ್ ಮಿಟಡೇ, ಮನೋಜ ಭಾವರೇ, ಶ್ರೀಮಂತ್ ಸಿಂಗ್, ರಾಕೇಶ್ ಸಿಂಗ್, ಸಿದ್ದಣ್ಣ ಮೇಳನವರ್, ವಾಸುದೇವ ಹುಣಸಿಮರದ, ರವಿ ಭಾವರೆ, ಉಸ್ಮಾನ್ ಮಾಳೆಕೊಪ್ಪ, ದಾರಾಸಿಂಗ ನವಲಗುಂದ, ರಾಜಾರಾಮ್‌ಸಿಂಗ್ ಈಶ್ವರ್‌ಸಿಂಗ್, ರೋಹಿತ್ ಸಿಂಗ್, ಶೀತಲ, ಮುತ್ತಣ್ಣ, ಗಣೇಶ್ ಜಡಿ, ಮಂಜುನಾಥ್ ಚಿಂಚಲಿ, ಪ್ರತಾಪ್ ಸಿಂಗ್, ಲಕ್ಕನ್ ಸಿಂಗ್, ಹಿರೇಮನ್ ಸಿಂಗ್, ವೀರೇಶ್ ಹೊಳೆಬಸಪ್ಪ ಅಕ್ಕಿ, ಗುರುರಾಜ್ ಭಜಂತ್ರಿ ಮುಂತಾದವರು ಉಪಸ್ಥಿತರಿದ್ದರು.

## 'ಸಂಯುಕ್ತ ಕರ್ನಾಟಕ' ಆರೋಗ್ಯ ಹಬ್ಬ ಉದ್ಘಾಟಿಸಿದ ಸಚಿವ ಗುಂಡೂರಾವ್ ಅಭಿಮತ

# ರಾಜ್ಯಕ್ಕೆ ವಂಚನೆ ಆಗುವುದು ಬೇಡ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಆರೋಗ್ಯ ಕ್ಷೇತ್ರಕ್ಕೆ ಸಮರ್ಪಕ ಹಾಗೂ ಹೆಚ್ಚಿನ ಅನುದಾನ ನೀಡುವುದರ ಜೊತೆಗೆ ರಾಜ್ಯಗಳ ಪರಿಸ್ಥಿತಿಗೆ ಅನುಗುಣವಾಗಿ ಆರೋಗ್ಯ ಯೋಜನೆಗಳನ್ನು ರೂಪಿಸಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ್ ಕೇಂದ್ರ ಸರ್ಕಾರವನ್ನು ಆಗ್ರಹಿಸಿದರು.



'ಸಂಯುಕ್ತ ಕರ್ನಾಟಕ' ದಿನಪತ್ರಿಕೆ ಏರ್ಪಡಿಸಿರುವ ಮೂರು ದಿನಗಳ 'ಆರೋಗ್ಯ ಹಬ್ಬ'ವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ಕೇಂದ್ರ ರೂಪಿಸಿರುವ ಮತ್ತು ರೂಪಿಸಲಿರುವ ಆರೋಗ್ಯ ಕಾರ್ಯಕ್ರಮಗಳಲ್ಲಿ ಕರ್ನಾಟಕಕ್ಕೆ ವಂಚನೆ ಆಗುವುದು ಬೇಡ. ರಾಜ್ಯಕ್ಕೆ ಬರಬೇಕಾದ ಅನುದಾನ ಮತ್ತು ಯೋಜನೆಗಳಲ್ಲಿ ವಂಚನೆ ಆಗುವುದು ಬೇಡ. ಆರೋಗ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಪಕ್ಷ ಮತ್ತು ಸರ್ಕಾರ ಎನ್ನುವ ಪ್ರಶ್ನೆ ಎದುರಾಗಕೂಡದು ಎಂದು ಕಳಕಳಿ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರದ ಕಾರ್ಯಕ್ರಮಗಳ ವಿಷಯದಲ್ಲಿ ರಾಜ್ಯವಾರು ಪ್ರತ್ಯೇಕ ನೀತಿ ಇರಬೇಕು. ಪ್ರತಿಯೊಂದು ರಾಜ್ಯದ ಆರೋಗ್ಯ ಸನ್ನಿವೇಶ ವಿಭಿನ್ನವಾಗಿರುತ್ತದೆ. ಒಂದು ರಾಜ್ಯದ ಸ್ಥಿತಿ ಇನ್ನೊಂದರಲ್ಲಿ ಇರುವುದಿಲ್ಲ. ಆದ್ದರಿಂದ ಕಾರ್ಯಕ್ರಮಗಳನ್ನು ರೂಪಿಸುವಾಗ ಏಕಪ್ರಕಾರದ ನೀತಿಗಳು ಸೂಕ್ತವಲ್ಲ. ಬಿಹಾರ ಮತ್ತಿತರ ರಾಜ್ಯಗಳಿಗೆ ಉಪಯೋಗವಾಗುವ ಕಾರ್ಯಕ್ರಮ ಕರ್ನಾಟಕಕ್ಕೆ ಆಗುವುದಿಲ್ಲ. ಇಲ್ಲಿನ ಸನ್ನಿವೇಶವೇ ಭಿನ್ನವಾಗಿರುತ್ತದೆ. ಹೀಗಾಗಿ ಕೇಂದ್ರದ ಆರೋಗ್ಯ ಕಾರ್ಯಕ್ರಮಗಳು ಆಯಾ ರಾಜ್ಯದ ಪರಿಸ್ಥಿತಿಗೆ ಅನುಗುಣವಾಗಿ ರೂಪಿತವಾಗಬೇಕಿದೆ ಎಂದು ದಿನೇಶ ಗುಂಡೂರಾವ್ ಅಭಿಪ್ರಾಯಪಟ್ಟರು.

ಲೋಕ ಶಿಕ್ಷಣ ಟ್ರಸ್ಟ್ ಅಧ್ಯಕ್ಷ, ವಿಧಾನ ಪರಿಷತ್ ಸದಸ್ಯ ಯು.ಬಿ. ವೆಂಕಟೇಶ ಸ್ವಾಗತಿಸಿದರು. ಧರ್ಮದರ್ಶಿ ಡಾ.ಗುರುರಾಜ ಕರಜಗಿ ಪ್ರಾಸ್ತಾವಿಕ ಭಾಷಣ ಮಾಡಿದರು.

ಈ ಸಂದರ್ಭದಲ್ಲಿ ಸ್ಪೀಕರ್ ಬಸವರಾಜ ಹೊರಟ್ಟಿ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಮಾಜಿ ಮುಖ್ಯಮಂತ್ರಿ ಮತ್ತು ಸಂಸದರಾದ ಜಗದೀಶ ಶೆಟ್ಟರ, ಬಸವರಾಜ ಬೊಮ್ಮಾಯಿ, ವಿಪಕ್ಷ ಉಪ ನಾಯಕ ಅರವಿಂದ ಬೆಲ್ಲದ, ಮೇಯರ್ ರಾಮಣ್ಣ ಬಡಿಗೇರ, ಜಿಲ್ಲಾಧಿಕಾರಿ ದಿವ್ಯಾಪ್ರಭು ಜೆ.ಆರ್.ಜೆ., ನೇತ್ರ ತಜ್ಞ ಡಾ. ಎಂ.ಎಂ. ಜೋಶಿ, ಉದ್ಯಮಿಗಳಾದ ಡಾ. ವಿ.ಎಸ್.ವಿ. ಪ್ರಸಾದ್, ಬಸವರಾಜ ಕಮತಗಿ, ಕಿಮ್ಸ್ ನಿರ್ದೇಶಕ ಡಾ. ಎಸ್.ಎಫ್. ಕಮ್ಮಾರ, ಶಿರಸಿ ನಿಸರ್ಗ ಮನೆಯ ಡಾ.ವೆಂಕಟರಮಣ ಹೆಗಡೆ, ಲೋಕಶಿಕ್ಷಣ ಟ್ರಸ್ಟ್‌ನ ಧರ್ಮದರ್ಶಿಗಳಾದ ಕೇಶವ ದೇಸಾಯಿ, ಡಾ.ಗುರುರಾಜ ಕರಜಗಿ, ಕಾರ್ಯದರ್ಶಿ ಹರಿಚನ್ನಕೇಶವ, 'ಸಂಯುಕ್ತ ಕರ್ನಾಟಕ'ದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮೋಹನ ಹೆಗಡೆ ಮತ್ತಿತರರು.

ರಾಜ್ಯದಲ್ಲಿ ಹೊಸ ತಾಲ್ಲೂಕು ಆಸ್ಪತ್ರೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ಜಿಲ್ಲಾಸ್ಪತ್ರೆಗಳನ್ನು ಸ್ಥಾಪಿಸಲು ಸರ್ಕಾರ ಹಲವಾರು ಹೆಜ್ಜೆಗಳನ್ನು ಇರಿಸಿದೆ. ಇದಕ್ಕಿಂತ ಮುಖ್ಯವಾಗಿ ಈಗಿರುವ ಆಸ್ಪತ್ರೆಗಳಲ್ಲಿ ವೈದ್ಯರು, ಸಿಬ್ಬಂದಿ ಮತ್ತು ಔಷಧಿ ಕೊರತೆ ನೀಗಿಸಲು ಆದ್ಯತೆ ನೀಡಲಾಗಿದೆ ಎಂದು ಸಚಿವರು ಹೇಳಿದರು.

ವಚನ ಚಿಂತನ ಕಾರ್ಯಕ್ರಮದಲ್ಲಿ ಶಿರೋಳ ಶಾಂತಲಿಂಗ ಶ್ರೀಗಳ ಅಭಿಮತ

# ವಚನ ಸಾಹಿತ್ಯ ಮನುಕುಲದ ದೀವಿಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಬಸವಾದಿ ಶರಣರ ವಚನ ಸಾಹಿತ್ಯದಿಂದ ಮನುಕುಲಕ್ಕೆ ಒಳಿತಾಗಿದೆ. ಧರ್ಮ, ಸಂಸ್ಕಾರ ಮತ್ತು ಸಂಸ್ಕೃತಿಯೊಂದಿಗೆ, ಮಾನವೀಯತೆಯನ್ನು ಪ್ರತಿಪಾದಿಸುವ ಧರ್ಮ ಬಸವಧರ್ಮವಾಗಿದೆ ಎಂದು ಭೈರನಹಟ್ಟಿ ದೊರೆಸ್ವಾಮಿ ವಿರಕ್ತಮಠ ಹಾಗೂ ಶಿರೋಳದ ತೋಂಟದಾರ್ಯ ಮಠದ ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು ಹೇಳಿದರು.

ಅವರು ಗದಗ ಒಕ್ಕಲಗೇರಿಯ ಶಿವಕುಮಾರ ಎಚ್.ಪಾಟೀಲ ಅವರ ಕಟ್ಟಡದಲ್ಲಿ ಬಸವದಳ, ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘದ ಆಶ್ರಯದಲ್ಲಿ ಶ್ರಾವಣ ಮಾಸದ ಅಂಗವಾಗಿ ಹಮ್ಮಿಕೊಂಡಿದ್ದ ವಚನ ಚಿಂತನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಶರಣ ಸಂಸ್ಕೃತಿಯ ಪ್ರತಿಪಾದಕ, ಬಸವಾಭಿಮಾನಿ ಶಿವಕುಮಾರ ಪಾಟೀಲ ಅವರ ಕುಟುಂಬ ಧರ್ಮನಿಷ್ಠೆ, ಸಂಸ್ಕೃತಿಗೆ ಹೆಸರಾದ ಕುಟುಂಬವಾಗಿದೆ. ಧರ್ಮ ಮತ್ತು ಧರ್ಮ ಗುರುಗಳ ಬಗ್ಗೆ ಶ್ರದ್ಧಾಭಕ್ತಿಯನ್ನು ಹೊಂದಿದವರು. ಪ್ರತಿ ವರ್ಷ ಶ್ರಾವಣ ಮಾಸದ ಒಂದು ದಿನ ಗದುಗಿನ ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಡಾ. ಪಂ.ಪುಟ್ಟರಾಜ ಕವಿ ಗವಾಯಿಗಳವರು ಪಾಟೀಲರ ಮನೆಯಲ್ಲಿದ್ದು ಪೂಜೆ, ಪ್ರಸಾದ, ಸಂಗೀತ, ಧರ್ಮ ಬೋಧನೆ, ಆಶೀರ್ವಚನ ಮಾಡಿ ಜನಸಮುದಾಯವನ್ನು ಸನ್ಮಾರ್ಗದೆಡೆ ಸಾಗುವಂತೆ ಬೋಧಿಸುತ್ತಿದ್ದರು. ಇದೀಗ ಪರಂಪರೆಯನ್ನು ವಚನ ಚಿಂತನ ಕಾರ್ಯಕ್ರಮ ಜರುಗಿಸುವ ಮೂಲಕ ಈ ಭಾಗದ ಜನತೆಗೆ ಒಳ್ಳೆ ಸಂದೇಶ ರವಾನಿಸಲು ಅವಕಾಶ ಕಲ್ಪಿಸಿರುವದು ಅಭಿನಂದನೀಯ ಎಂದರು.



ಮಂಗಳಾ ಕಾಮಣ್ಣವರ ಶರಣ ಅಲ್ಲಮಪ್ರಭು ದೇವರ ವಚನ ಚಿಂತನೆಯನ್ನು ಮಾಡಿದರು. ಈ ವಚನವನ್ನು ಎಸ್.ಪಿ. ಹೊಂಬಳ ಅವರು ಸಂಗೀತಕ್ಕೆ ಅಳವಡಿಸಿ ರಾಗಬದ್ಧವಾಗಿ ಹಾಡಿದರು. ಅಧ್ಯಕ್ಷತೆಯನ್ನು ವಹಿಸಿದ್ದ ಬಸವ ದಳದ ಅಧ್ಯಕ್ಷ ವ್ಹಿ.ಕೆ. ಕರಿಗೌಡ್ರ ಸಂದರ್ಭೋಚಿತವಾಗಿ ಮಾತನಾಡಿದರು.

ಶರಣ ಮತ್ತು ಶರಣೆಯರ ವಚನಗಳು ಆದರ್ಶಮಯ ಬದುಕಿಗೆ ಬೆಳಕಾಗಿವೆ. ಎಲ್ಲರನ್ನೂ ಸನ್ಮಾರ್ಗದೆಡೆ ಮುನ್ನಡೆಸುವ ವಚನ ಸಾಹಿತ್ಯವನ್ನು ನಾವಿಂದು ಓದಬೇಕು, ಅರಿತುಕೊಳ್ಳಬೇಕು. ಅದರಂತೆ ನಡೆದುಕೊಳ್ಳಬೇಕು. ಅಂದಾಗ ಜೀವನ ಪಾವನಗೊಳ್ಳುವದು ಎಂದು ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು ಹೇಳಿದರು.

ಭಾರತಿ ಶಿವಕುಮಾರ ಪಾಟೀಲ ದಂಪತಿಗಳನ್ನು ಹಾಗೂ ವಚನ ಚಿಂತನೆಗೈದಯ ಮಂಗಳಾ ಕಾಮಣ್ಣವರ ಅವರನ್ನು ಪೂಜ್ಯರು ಸನ್ಮಾನಿಸಿ ಗೌರವಿಸಿದರು. ಪ್ರಾರಂಭದಲ್ಲಿ ಸಾಮೂಹಿಕ ಪ್ರಾರ್ಥನೆ ಜರುಗಿತು. ಶಿವಕುಮಾರ ಪಾಟೀಲ ಸ್ವಾಗತಿಸಿದರು, ಕಿರಣ ತಿಪ್ಪಣ್ಣವರ ನಿರೂಪಿಸಿದರು. ವಚನ ಮಂಗಲಗೀತೆಯೊಂದಿಗೆ ಕಾರ್ಯಕ್ರಮ ಸಂಪನ್ನಗೊಂಡವು.

ಕಾರ್ಯಕ್ರಮದಲ್ಲಿ ಬಸವದಳ, ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘದ ಪದಾಧಿಕಾರಿಗಳು, ಬಸವಾಭಿಮಾನಿಗಳು, ಒಕ್ಕಲಗೇರಿಯ ಗುರುಹಿರಿಯರು ಪಾಲ್ಗೊಂಡಿದ್ದರು.

# ದೇವರ ಸ್ಮರಣೆಯೊಂದಿಗೆ ಪ್ರಬುದ್ಧತೆ ಹೊಂದಿ



■ವಿಜಯಸಾಕ್ಷಿ ಸುದ್ದಿ, ನರೇಗಲ್

ಧರ್ಮ, ಆತ್ಮಸಾಕ್ಷಿಗೆ ಅನುಗುಣವಾಗಿ ದೇವರ ಸ್ಮರಣೆಯೊಂದಿಗೆ ಪ್ರಬುದ್ಧತೆ ಹೊಂದುವದೇ ಮಾನವೀಯ ಮೌಲ್ಯಗಳಾಗಿವೆ ಎಂದು ಹುಬ್ಬಳ್ಳಿ ಈಶ್ವರೀಯ ವಿಶ್ವವಿದ್ಯಾಲಯದ ಬಿ.ಕೆ. ನಿರ್ಮಲಕ್ಕ ಹೇಳಿದರು.

ಅವರು ಇಲ್ಲಿನ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಏರ್ಪಡಿಸಿದ್ದ ರಕ್ಷಾಬಂಧನ ಕಾರ್ಯಕ್ರಮದಲ್ಲಿ ಮಾತನಾಡಿ, ಮನುಷ್ಯನಿಗೆ ಮೌಲ್ಯಗಳನ್ನು ಬೆಳೆಸುವ ಸದ್ಗುಣಗಳು ಬೇಕು. ಅದರಿಂದ ಪ್ರತಿಯೊಬ್ಬ ಜೀವಿ ಶಾಂತಿ, ನೆಮ್ಮದಿಯ ಜೀವನ ಸಾಗಿಸಲು ಸಾಧ್ಯ. ಹಳ್ಳಗಳಿಂದ ಹರಿಯುವ ನೀರು ಸಮುದ್ರ ಸೇರುವಂತೆ ವಿವಿಧ ಧರ್ಮದ ಆಚಾರ ವಿಚಾರಗಳು ದೇವರಲ್ಲಿ ಸೇರುತ್ತವೆ. ಹಿಂದಿನ ಕಾಲದ ಕುಟುಂಬಗಳಲ್ಲಿ ಎಲ್ಲರೂ ಒಂದೇ ಎಂಬ ಭಾವನಾತ್ಮಕ ಸಂಬಂಧದೊಂದಿಗೆ ಅಭಿವ್ಯಕ್ತ ಕುಟುಂಬಗಳಿದ್ದವು. ಇಂದು ಇಬ್ಬರು ದಂಪತಿಗಳಿಗೆ ಒಂದು ಅಥವಾ ಎರಡು ಮಕ್ಕಳನ್ನು ಹೆರುವುದೇ ದುಸ್ತರವಾಗಿದೆ. ಇಂದು ಕುಟುಂಬ ಚಿಕ್ಕದಿದ್ದರೂ ನೆಮ್ಮದಿ ಎಂಬುದು ಮರಿಚೀಕೆಯಾಗಿದೆ ಎಂದು ಹೇಳಿದರು.

ನರೇಗಲ್ಲ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ. ಸವಿತಕ್ಕ ಪ್ರಾಸ್ತಾವಿಕವಾಗಿ ಮಾತನಾಡಿ, ಶಾಂತಿ, ಸಹನೆ ಎಂಬುದು ಮಾರುಕಟ್ಟೆಯಲ್ಲಿ ಸಿಗುವ ವಸ್ತುವಲ್ಲ. ಅದು ನಮ್ಮ ಅಂತರಾತ್ಮ ಶುದ್ಧಿಯಿಂದ ಬರುವಂತದ್ದಾಗಿದೆ. ಇಂತಹ ಆಧ್ಯಾತ್ಮಿಕ ಕೇಂದ್ರಗಳಿಗೆ ಬಂದು ಕೇವಲ ಒಂದು ಗಂಟೆ ನಿಮ್ಮ ಸಮಯವನ್ನು ಮೀಸಲಿಟ್ಟರೆ ಸಾಕು ನಿಮ್ಮ ಆತ್ಮ ಸಾಕ್ಷಾತ್ಕಾರಗೊಳ್ಳುವುದರಲ್ಲಿ ಸಂದೇಹವಿಲ್ಲ ಎಂದರು.

ಈಶ್ವರೀಯ ವಿಶ್ವವಿದ್ಯಾಲಯದ ಎಲ್ಲ ಬಳಗ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ನಂತರ ಎಲ್ಲರಿಗೂ ಆಂಧ್ರಪ್ರದೇಶ ಆದ್ವಾನಿಯು ಈಶ್ವರೀಯು ಈಶ್ವರಿಯು ವಿಶ್ವವಿದ್ಯಾಲಯುದ ಬಿ.ಕೆ. ನಿರ್ಮಲಕ್ಕ ಹಾಗೂ ಲಕ್ಷ್ಮೀ ರಕ್ಷಾಭಂದನ ಕವಚ ಕಟ್ಟಿದರು.

# ಹೈಮಾಸ್ಟ್ ಬೀದಿದೀಪ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವಾರ್ಡ್ ನಂ. 30ರ ಪುಟ್ಟರಾಜ ನಗರದ ಶ್ರೀ ಸಿದ್ಧಿವಿನಾಯಕ ದೇವಸ್ಥಾನದ ಬಳಿ ಹೈಮಾಸ್ಟ್ ಬೀದಿದೀಪ ಉದ್ಘಾಟಿಸಲಾಯಿತು.

ಪಂಡಿತ ಪುಟ್ಟರಾಜ ವಿವಿಧೋದ್ದೇಶಗಳ ಸೇವಾ ಸಂಘದ ಅಧ್ಯಕ್ಷ ಎಸ್.ಆರ್. ಪಾಟೀಲರ ಅಧ್ಯಕ್ಷತೆಯಲ್ಲಿ, ವಾರ್ಡಿನ ಸದಸ್ಯೆ ಪದ್ಮಾ ಕಟಗಿ, ಪ್ರಥಮ ದರ್ಜೆ ಗುತ್ತಿಗೆದಾರ ಆಂಜನೇಯ ಕಟಗಿ ಇವರ ಉಪಸ್ಥಿತಿಯಲ್ಲಿ ಗದಗ ಶಹರ ಕಾಂಗ್ರೆಸ್ ಘಟಕದ ಅಧ್ಯಕ್ಷ ಬಿ.ಬಿ. ಅಸೂಟಿ ಹೈಮಾಸ್ಟ್ ದೀಪ ಉದ್ಘಾಟಿಸಿದರು.

ಈಶ್ವರೀಯ ವಿಶ್ವವಿದ್ಯಾಲಯದ ರೇಖಾ ಅಕ್ಕನವರು, ಗಿರಿಧರಸಿಂಗ ಬ್ಯಾಳಿ, ಎಸ್.ಆರ್. ಪಾಟೀಲ, ಎಸ್.ವ್ಹಿ ಹಿರೇಮಠ, ಉಮೇಶಗೌಡ ಪಾಟೀಲ, ಪಿ.ಜಿ. ಚವಡಿ, ಬಸಣ್ಣ ಶಲವಡಿ, ಎಸ್.ಪಿ. ಪವಾಡಶೆಟ್ಟರ, ಪ್ರಕಾಶ ಬಂಡಿ, ಅರುಣ ಗಣಾಚಾರಿ, ಹಾಳಕೇರಿ ದಂಪತಿಗಳು ಹಾಗೂ ಪುಟ್ಟರಾಜ ಬಡಾವಣೆಯ ನಾಗರಿಕರು ಉಪಸ್ಥಿತರಿದ್ದರು.

# ಮಕ್ಕಳಲ್ಲಿ ಕ್ರೀಡಾಸಕ್ತಿ ಹೆಚ್ಚಿಸಿ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಹಲವಾರು ದೇಸೀ ಕ್ರೀಡೆಗಳು ಮರೀಚಿಕೆಯಾಗುತ್ತಿದ್ದು, ಅವುಗಳನ್ನು ಇಂದಿನ ಮಕ್ಕಳಿಗೆ ತಿಳಿಸುವ ಅಗತ್ಯವಿದೆ ಎಂದು ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಅಭಿಪ್ರಾಯಪಟ್ಟರು.

ತಾಲೂಕಿನ ಚಿಗಟೇರಿ ಗ್ರಾಮದಲ್ಲಿ ನಾರದ ಮುನಿ ಪ್ರೌಢಶಲೆಯಲ್ಲಿ ನಡೆದ ವಲಯಮಟ್ಟ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇಂದಿನ ಮಕ್ಕಳಿಗೆ ಕೇವಲ ಕ್ರಿಕೆಟ್ ಆಟದ ಬಗ್ಗೆ ಹೆಚ್ಚಿನ ಆಸಕ್ತಿಯಿದ್ದು, ದೇಸೀ ಕ್ರೀಡೆಗಳಾದ ಖೋಖೋ, ಕಬಡ್ಡಿ, ಮಲ್ಲಕಂಬ, ಕುಸ್ತಿಗಳಂತಹ ಆಟಗಳು ಕಣ್ಮರೆಯಾಗುತ್ತಿವೆ. ಮಕ್ಕಳಲ್ಲಿ ಕ್ರೀಡೆಯ ಜೊತೆಗೆ ವಿವಿಧ ಕ್ಷೇತ್ರಗಳಲ್ಲಿ ಅಭಿರುಚಿಯನ್ನು ಮೂಡಿಸುವ ಕೆಲಸವನ್ನು ಶಿಕ್ಷಕರು ಮಾಡಬೇಕು ಎಂದರು.



ದೈಹಿಕ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಎಂ.ಹೆಚ್. ಜನಾರ್ಧನ ರೆಡ್ಡಿ ಮಾತನಾಡಿ, ಮಕ್ಕಳು ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಲು ಬಾಲ್ಯದಲ್ಲಿ ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಢವಾದ ದೇಹವನ್ನು ಹೊಂದಿಬೇಕಾಗುತ್ತದೆ. ಹಾಗಾದಲ್ಲಿ ಮಾತ್ರ ಉತ್ತಮ ಜೀವನವನ್ನು ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಚಿಗಟೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕುಬೇರ ಗೌಡ, ಬಸವನಗೌಡ, ನಿತ್ಯಾನಂದ ಎಂ, ಗ್ರಾ.ಪಂ. ಅಧ್ಯಕ್ಷ ನಾಗರಾಜ, ದೈಹಿಕ ಪರಿವೀಕ್ಷಕ ಕೆ. ಷಣ್ಮುಖಪ್ಪ, ಮುಖ್ಯ ಶಿಕ್ಷಕ ಟಿ. ಓಬಳೇಶ, ಗುರುಮೂರ್ತಿ, ದಯಾನಂದ, ಚಂದ್ರಪ್ಪ ಇತರರಿದ್ದರು.

# ವಿಶೇಷ ಮಕ್ಕಳ ಸೇವೆ ಮಾಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿಶೇಷ ಚೇತನ ಮಕ್ಕಳು ದೈವಸ್ವರೂಪಿಗಳಾಗಿದ್ದು, ಅವರಿಗೆ ಸಮಾಜದ ಪ್ರತಿಯೊಬ್ಬರ ಪ್ರೀತಿ, ಕಾಳಜಿ ಅವಶ್ಯವಾಗಿದೆ. ಸೇವಾ ಮನೋಭಾವದಿಂದ ಇಂತಹ ಮಕ್ಕಳ ಸೇವೆ ಮಾಡಿದಲ್ಲಿ ಸಮಾಜಕ್ಕೆ ಒಳ್ಳೆಯ ಸಂದೇಶ ನೀಡಿದಂತಾಗುತ್ತದೆ. ಈ ನಿಟ್ಟಿನಲ್ಲಿ ಪಟ್ಟಣದ ಅರಳು ವಿಶೇಷ ಅಗತ್ಯತೆಯುಳ್ಳ ಬುದ್ದಿಮಾಂಧ್ಯ ಮಕ್ಕಳ ವಸತಿ ರಹಿತ ಶಾಲೆಯ ಸಿಬ್ಬಂದಿಗಳ ಪ್ರಾಮಾಣಿಕ ಸೇವಾಕಾರ್ಯ ಎಲ್ಲರಿಗೂ ಮಾದರಿಯಾಗಿದೆ ಎಂದು ಅಗಡಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಡಾ.ಪರಶುರಾಮ ಬಾರಕಿ ಹೇಳಿದರು.

ಅವರು ಪಟ್ಟಣದ ಅರಳು ವಿಶೇಷ ಅಗತ್ಯತೆಯುಳ್ಳ ಬುದ್ದಿಮಾಂಧ್ಯ ಮಕ್ಕಳ ವಸತಿ ರಹಿತ ಶಾಲೆಯಲ್ಲಿ ಅಗಡಿ ಸಂಸ್ಥೆಯ ಚೇರಮನ್ ಹರ್ಷವರ್ಧನ ಅಗಡಿ ಅವರ ಜನ್ಮದಿನವನ್ನು ಬುದ್ದಿಮಾಂಧ್ಯಮಕ್ಕಳಿಗೆ ಅಗತ್ಯ ವಸ್ತುಗಳನ್ನು ವಿತರಿಸಿ ಆಚರಿಸಿದ ಸಂದರ್ಭದಲ್ಲಿ ಮಾತನಾಡಿದರು.



ಪಿಯು ಕಾಲೇಜು ಪ್ರಾಚಾರ್ಯ ಡಾ. ಎನ್. ಹಯವದನ ಮಾತನಾಡಿದರು. ಸಂಸ್ಥೆಯ ಮುಖ್ಯೋಪಾಧ್ಯಾಯೆ ನೀಲಮ್ಮ ದಾಸಪ್ಪನವರ ಸಂಸ್ಥೆಯ ಪರಿಚಯವನ್ನು ಮಾಡಿಕೊಟ್ಟರು.

ಜನ್ಮದಿನದ ಪ್ರಯುಕ್ತ ಶಾಲಾ ಆವರಣದಲ್ಲಿ ಸಸಿಗಳನ್ನು ನೆಡಲಾಯಿತು. ವಿಶೇಷ ಮಕ್ಕಳಿಗೆ ವಾಲಿಬಾಲ್, ಕೇರಂ, ಬ್ಯಾಟ್, ಬಾಲ್, ಬ್ಯಾಡ್ಮಿಂಟನ್ ಹಾಗೂ ಥೆರಪಿ ಸಾಮಗ್ರಿಗಳನ್ನು ಅಗಡಿ ಸಂಸ್ಥೆಯ ವತಿಯಿಂದ ನೀಡಲಾಯಿತು.

ಅಗಡಿ ಸಂಸ್ಥೆಯು ಆಡಳಿತಾಧಿಕಾರಿ ವಿಕ್ರಮ ಶಿರೋಳ, ಲೆಕ್ಕಪರಿಶೋಧಕ ರವಿಪ್ರಕಾಶ, ಡಾ. ಆರ್.ಎಮ್. ಪಾಟೀಲ ಡಾ. ರಾಜಶೇಖರ ಕೂನಬೇವು, ಡಾ. ದೇವೇಂದ್ರ ಕೆ, ಡಾ. ಸಂತೋಷ ಬುಜರಿ, ಪ್ರೊ. ಪ್ರಕಾಶ ಹೊಂಗಲ್, ಪ್ರೊ. ದಯಾನಂದ ಬಡಗನ್ನವರ, ಪ್ರೊ. ಪ್ರತೀಮಾ ಮಾಪುರುಷ, ಪ್ರೊ. ರಾಜೇಶ್ವರಿ ಗಾಮನಗಟ್ಟಿ, ಪ್ರೊ. ಸಿ.ಎಂ. ಕಗ್ಗಲಗೌಡ್ರ, ಶಿಕ್ಷಕರಾದ ಲಲಿತಾ ದಾಸಪ್ಪನವರ, ಮಹಾಂತೇಶ, ಪ್ರಶಾಂತ ಎಸ್, ನೇತ್ರಾ ತಳಗೇರಿ, ಅಕ್ಕಮ್ಮ ಕೊರದಾಳ, ಗೌರಮ್ಮ, ಹೇಮಾವತಿ ಮುಂತಾದವರಿದ್ದರು.

## ಮುಡಾ ನಿವೇಶನ ವಿವಾದ: ಬೆನ್ನಿಗೆ ನಿಂತ ಹೈಕಮಾಂಡ್ ವರಿಷ್ಠರಿಗೆ ಧನ್ಯವಾದ ತಿಳಿಸಿದ ಸಿಎಂ ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿವಾದಾತ್ಮಕ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಪ್ರಕರಣದ ಕುರಿತು ಮುಂದಿನ ವಾರ ನಡೆಯಲಿರುವ ಹೈಕೋರ್ಟ್ ವಿಚಾರಣೆಗೆ ಮುಂಚಿತವಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಉನ್ನತ ನಾಯಕತ್ವದಿಂದ ಬೆಂಬಲ ಪಡೆದಿದ್ದಾರೆ. ಈ ಬಗ್ಗೆ ನ್ಯಾಯಾಲಯದಲ್ಲಿ ಹೋರಾಡಲು ಪಕ್ಷವು ನಿರ್ಧರಿಸಿದ್ದು, ರಾಷ್ಟ್ರಪತಿಗಳೊಂದಿಗಿನ ಸಭೆ ಸೇರಿದಂತೆ ಎಲ್ಲಾ ಆಯ್ಕೆಗಳನ್ನು ಅನ್ವೇಷಿಸುವುದಕ್ಕೆ ಪಕ್ಷ ಮುಂದಾಗಿದೆ ಎಂದು ತಿಳಿದುಬಂದಿದೆ.

ರಾಷ್ಟ್ರ ರಾಜಧಾನಿಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿದ ನಂತರ, "ಸಿದ್ದರಾಮಯ್ಯ ಅವರು ತಮ್ಮ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ಕರ್ನಾಟಕ ರಾಜ್ಯಪಾಲರ ಕ್ರಮ ಕಾನೂನುಬಾಹಿರವಾಗಿದೆ ಮತ್ತು ಅದನ್ನು ಈಗಾಗಲೇ ನ್ಯಾಯಾಲಯದಲ್ಲಿ ಪ್ರಶ್ನಿಸಲಾಗಿದೆ" ಎಂದರು.

ಹೈಕಮಾಂಡ್ ಭೇಟಿ ನಂತರ ಹೇಳಿಕೆ ಬಿಡುಗಡೆ ಮಾಡಿರುವ ಅವರು, "ನಮ್ಮ ಹೈಕಮಾಂಡ್‌ನ ನಾಯಕರುಗಳಾದ ಮಲ್ಲಿಕಾರ್ಜುನ ಖರ್ಗೆಯವರಿಗೆ, ರಾಹುಲ್ ಗಾಂಧಿಯವರಿಗೆ, ಕೆ.ಸಿ. ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೆವಾಲ ಅವರಿಗೆ ನನ್ನ ಧನ್ಯವಾದಗಳು. ಕರ್ನಾಟಕದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳು, ರಾಜ್ಯಪಾಲರು ನನ್ನ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಪಕ್ಷಪಾತ ಧೋರಣೆಯ ಬಗ್ಗೆ ಇಂದಿನ ಸಭೆಯಲ್ಲಿ ವಿವರಿಸಿದ್ದೇವೆ. ರಾಜ್ಯಪಾಲರ ನಿರ್ಣಯದ ವಿರುದ್ಧ ನಾನು ಈಗಾಗಲೇ ನ್ಯಾಯಾಲಯದ ಮೊರೆ ಹೋಗಿದ್ದೇನೆ, ನನಗೆ ನ್ಯಾಯ ವ್ಯವಸ್ಥೆಯಲ್ಲಿ, ಈ ನೆಲದ ಕಾನೂನಿನಲ್ಲಿ ನಂಬಿಕೆಯಿದೆ. ರಾಜ್ಯಪಾಲರು ತೆಗೆದುಕೊಂಡಿರುವ ನಿರ್ಣಯ ಅಸಾಂವಿಧಾನಿಕ ಮತ್ತು ಕಾನೂನು ಬಾಹಿರವಾಗಿದ್ದು, ನ್ಯಾಯಾಲಯದಲ್ಲಿ ನ್ಯಾಯ ಸಿಗುವ ಭರವಸೆಯಿದೆ. ನನ್ನ ಬೆಂಬಲಕ್ಕೆ ನಿಂತಿರುವ ಪಕ್ಷದ ಹೈಕಮಾಂಡ್ ಗೆ ಮತ್ತೊಮ್ಮೆ ಧನ್ಯವಾದಗಳು" ಎಂದು ಹೇಳಿದ್ದಾರೆ.

## ತಮಿಳುನಾಡು: ಮಹಿಳಾ ಪೊಲೀಸರಿಗೆ 1 ವರ್ಷದ ಹೆರಿಗೆ ರಜೆ ಘೋಷಿಸಿದ ಮುಖ್ಯಮಂತ್ರಿ ಎಂ ಕೆ ಸ್ಟಾಲಿನ್

■ವಿಜಯಸಾಕ್ಷಿ ಸುದ್ದಿ, ತಮಿಳುನಾಡು

ರಾಜ್ಯ ಪೊಲೀಸ್ ಪಡೆಯಲ್ಲಿರುವ ಮಹಿಳಾ ಪೊಲೀಸರು ಒಂದು ವರ್ಷದ ಹೆರಿಗೆ ರಜೆಗೆ ಅರ್ಹರಾಗಿರುತ್ತಾರೆ ಮತ್ತು ಕೆಲಸವನ್ನು ಪುನರಾರಂಭಿಸಿದ ನಂತರ ಅವರನ್ನು ತಮ್ಮ ಮಕ್ಕಳನ್ನು ಪೋಷಿಸಲು ಮೂರು ವರ್ಷಗಳ ಕಾಲ ಅವರ ಆಯ್ಕೆಯ ಸ್ಥಳದಲ್ಲಿ ನಿಯೋಜಿಸಲಾಗುವುದು ಎಂದು ತಮಿಳುನಾಡು ಮುಖ್ಯಮಂತ್ರಿ ಎಂ ಕೆ ಸ್ಟಾಲಿನ್ ಶುಕ್ರವಾರ ಘೋಷಿಸಿದರು.

2021 ರಲ್ಲಿ ಅಧಿಕಾರ ಹಿಡಿದ ನಂತರ, ಡಿಎಂಕೆ ಸರ್ಕಾರವು ತನ್ನ ಉದ್ಯೋಗಿಗಳಿಗೆ ಹೆರಿಗೆ ರಜೆಯ ಅವಧಿಯನ್ನು ಒಂಬತ್ತು ತಿಂಗಳಿಂದ ಒಂದು ವರ್ಷಕ್ಕೆ ಹೆಚ್ಚಿಸಿದೆ ಎಂಬುದನ್ನು ಸ್ಮರಿಸಬಹುದು.

ಮಹಿಳಾ ಪೊಲೀಸರಿಗೆ ಒಂದು ವರ್ಷದ ಹೆರಿಗೆ ರಜೆ ನೀಡಲಾಗುವುದು ಮತ್ತು ಕೆಲಸಕ್ಕೆ ಮರಳಿದ ನಂತರ ಅವರನ್ನು ಅವರ ಪತಿ ಅಥವಾ ಪೋಷಕರ ಸ್ಥಳದಲ್ಲಿ ಮೂರು ವರ್ಷಗಳ ಕಾಲ ಅವರ ಮಕ್ಕಳನ್ನು ನೋಡಿಕೊಳ್ಳಲು ನಿಯೋಜಿಸಲಾಗುವುದು" ಎಂದು ಮುಖ್ಯಮಂತ್ರಿಗಳು ಘೋಷಿಸಿದರು.

ಇಲ್ಲಿನ ರಾಜರತ್ನಂ ಕ್ರೀಡಾಂಗಣದಲ್ಲಿ ಪ್ರತಿಭಾನ್ವಿತ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ರಾಷ್ಟ್ರಪತಿ ಪದಕಗಳು, ಕೇಂದ್ರ ಗೃಹ ಸಚಿವರ ಪದಕಗಳು ಮತ್ತು ತಮಿಳುನಾಡು ಮುಖ್ಯಮಂತ್ರಿಗಳ ಪದಕ ಪಡೆದ ಪೊಲೀಸರಿಗೆ ಅಭಿನಂದಿಸಿ ಮಾತನಾಡಿದರು.

ಪೊಲೀಸ್ ಇಲಾಖೆಯ ಸಿಬ್ಬಂದಿಯ ಕೋರಿಕೆಯ ಮೇರೆಗೆ ಈ ಇಂಗಿತವನ್ನು ವಿಸ್ತರಿಸಲಾಗಿದೆ ಎಂದು ಅವರು ಹೇಳಿದರು.




ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ಉತ್ತರ ಕರ್ನಾಟಕ ಜಿಲ್ಲೆಗಳ ಕಾರ್ಯಕಾರಿಣಿ ಸಭೆಯು ರಾಜ್ಯಾಧ್ಯಕ್ಷರದ ಪಿ. ಕೃಷ್ಣೆಗೌಡ ಇವರ ಸಾರಥ್ಯದಲ್ಲಿ ಹಾಗೂ ಗದಗ ಜಿಲ್ಲಾಧ್ಯಕ್ಷ ಗವಿಸಿದ್ದಪ್ಪ ಹ್ಯಾಟಿ ಇವರ ನೇತೃತ್ವದಲ್ಲಿ ಗದಗ ನಗರದ ಮಂಜುನಾಥ್ ರೆಸಿಡೆನ್ಸಿಯಲ್ಲಿ ನೆರವೇರಿತು. ಈ ಸಭೆಯಲ್ಲಿ ಉತ್ತರ ಕರ್ನಾಟಕದ 12 ಜಿಲ್ಲೆಗಳ ಜಿಲ್ಲಾಧ್ಯಕ್ಷರು, ಕಾರ್ಯಕರ್ತರು, ಜಿಲ್ಲೆಯ ಎಲ್ಲ ತಾಲೂಕಾಧ್ಯಕ್ಷರು, ಬೆಳಗಾವಿ ವಿಭಾಗದ ಅಧ್ಯಕ್ಷರು ಪಾಲ್ಗೊಂಡಿದ್ದರು.

ನೂತನ ದೇವಸ್ಥಾನದ ಉದ್ಘಾಟನೆ ಹಾಗೂ ಕಳಸಾರೋಹಣ ಕಾರ್ಯಕ್ರಮ

# ಧರ್ಮದ ಹಾದಿಯಲ್ಲಿ ನಡೆಯಿರಿ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಪ್ರತಿಯೊಬ್ಬರೂ ತಂದೆ-ತಾಯಿಗಳ ಸೇವೆ ಮಾಡಿ, ಗುರು-ಹಿರಿಯರನ್ನು ಪೂಜ್ಯ ಭಾವನೆಯಿಂದ ಕಾಣಬೇಕು. ಮಾನವ ಕುಲ ಶಾಂತಿ, ನೆಮ್ಮದಿಯಿಂದ ಜೀವನ ಸಾಗಿಸಲು ಹಾಗೂ ಶ್ರೇಷ್ಠವಾದ ಬದುಕು ಸಾಗಿಸಲು ಧರ್ಮದ ಹಾದಿಯಲ್ಲಿ ನಡೆಯಿರಿ. ಗುರು-ಹಿರಿಯರ ಮಾರ್ಗದರ್ಶನದಲ್ಲಿ ನಡೆದರೆ ಜೀವನ ಸುಖಮಯವಾಗುತ್ತದೆ ಎಂದು ಕುಕನೂರ ತಾಲೂಕಿನ ಇಟಗಿ ಗ್ರಾಮದ ಮರಳುಸಿದ್ದೇಶ್ವರ ಪುಣ್ಯಾಶ್ರಮದ ಶಿವಶರಣ ಗದಿಗೆಪ್ಪಜ್ಜನವರು ಹೇಳಿದರು.

ಅವರು ಸಮೀಪದ ಜಕ್ಕಲಿ ಗ್ರಾಮದ ಡಾ. ಬಿ.ಆರ್. ಅಂಬೇಡ್ಕರ ನಗರದಲ್ಲಿ ಇತ್ತೀಚೆಗೆ ನಡೆದ ಕೆಂಚಮ್ಮ ಮತ್ತು ಮರಿಯಮ್ಮ ದೇವಿಯರ ನೂತನ ದೇವಸ್ಥಾನದ ಉದ್ಘಾಟನೆ ಹಾಗೂ ಕಳಸಾರೋಹಣ, ಸನ್ಮಾನ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದ ರೋಣ ಪುರಸಭಾ ಉಪಾಧ್ಯಕ್ಷ ಮಿಥುನ ಪಾಟೀಲ, ಯುವ ಪೀಳಿಗೆ ಭಾರತೀಯ ಸಂಸ್ಕೃತಿಯನ್ನು ಅಳವಡಿಸಿಕೊಳ್ಳಬೇಕು. ತಂದೆ-ತಾಯಿಗಳು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ಸಂಸ್ಕಾರವನ್ನು ನೀಡಿ ಉತ್ತಮ ಪ್ರಜೆಗಳನ್ನಾಗಿ ರೂಪಿಸಬೇಕು ಎಂದರು.



ಈ ಸಂದರ್ಭದಲ್ಲಿ ಅನೇಕ ದಾನಿಗಳನ್ನು, ಗಣ್ಯ ಮಾನ್ಯರನ್ನು ಸನ್ಮಾನಿಸಲಾಯಿತು. ಸವಡಿ ಗ್ರಾಮದ ಮರಳು ಸಿದ್ದೇಶ್ವರಮಠದ ಮರಳುಸಿದ್ದೇಶ್ವರ ಮಹಾಸ್ವಾಮಿಗಳು, ಅರ್ಚಕ ಮುತ್ತಪ್ಪ ಪೂಜಾರ ಸಾನಿಧ್ಯ ವಹಿಸಿದ್ದರು. ಗ್ರಾ.ಪಂ ಮಾಜಿ ಅಧ್ಯಕ್ಷ ಯಲ್ಲಪ್ಪ ಮಾದರ ಅಧ್ಯಕ್ಷತೆಯನ್ನು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಗ್ರಾಪಂ ಅಧ್ಯಕ್ಷೆ ಗಂಗವ್ವ ಜಂಗಣ್ಣವರ, ಅಶೋಕಪ್ಪ ಕಡಗದ, ಶಿವನಾಗಪ್ಪ ದೊಡ್ಡಮೇಟಿ, ಶರಣಪ್ಪ ಬೂದಿಹಾಳ, ಅನಿಲಕುಮಾರ ಹೊಸಮನಿ, ಶೇಖಪ್ಪ ಮಾರನಬಸರಿ, ಬಸವರಾಜ ರಂಗಣ್ಣನವರ, ಗ್ರಾಪಂ ಉಪಾಧ್ಯಕ್ಷೆ ಯಲ್ಲವ್ವ ಮಾದರ, ಯಮನೂರಸಾಬ ನದಾಫ್, ಸಣ್ಣದ್ಯಾಮಣ್ಣ ಮಡಿವಾಳರ, ಚನ್ನಬಸಪ್ಪ ಸೂಡಿ ಭಾಗವಹಿದ್ದರು.

ಬಳಗಾನೂರಿನ ಆಕಾಶವಾಣಿ ಕಲಾವಿದ ಸೋಮಯ್ಯ ದೊಡ್ಡಮನಿ ಮಾತನಾಡಿ, ಪ್ರತಿಯೊಬ್ಬರ ಮನಸ್ಸು ಪರಿಶುದ್ಧವಾಗಿರಬೇಕು. ಸಮಾಜದಲ್ಲಿ ಒಳ್ಳೆಯ ಕಾರ್ಯಗಳಿಗೆ ಪ್ರತಿಯೊಬ್ಬರಿಗೂ ಪ್ರೋತ್ಸಾಹ ನೀಡಬೇಕು. ಎಲ್ಲಾ ಒಂದೇ ಎಂಬ ಭಾವನೆ ಬಂದಾಗ ಮಾತ್ರ ಸಮಾನತೆಯಿಂದ ಇರಲು ಸಾಧ್ಯ. ದಿನನಿತ್ಯ ತಂದೆ-ತಾಯಿಗಳನ್ನು ಸ್ಮರಿಸಬೇಕು ಎಂದರು.

ಮಹಾರಾಷ್ಟ್ರದ ಸುರೇಶ, ರಂಜಾನಸಾಬ ಕಳ್ಳಿಗುಡಿ, ಫಕೀರಪ್ಪ ಮಾದರ, ಅಂದಪ್ಪ ಮಾದರ, ಅಶೋಕ ಮಾದರ, ಯಲ್ಲಪ್ಪ ಮಾದರ, ಅಂದಪ್ಪ ಮಾದರ, ಹನುಮಂತ ಮಾದರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಡಿಸಿಪಿ ಅನಿತಾ ಹದ್ದಣ್ಣವರ ಮುಖ್ಯಮಂತ್ರಿ ಪದಕಕ್ಕೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿಗೆ ಹೆಲ್ತ್ ಕ್ಯಾಂಪ್ ನಿವಾಸಿಗಳಾದ ದಿ. ಭೀಮಪ್ಪ ನಿಂಗಪ್ಪ ಹದ್ದಣ್ಣವರ ಶ್ರೀಮತಿ ಕುಂಕುಮ ಭೀಮಪ್ಪ ಹದ್ದಣ್ಣವರ ದಂಪತಿಯ ಮಗಳಾದ ಅನಿತಾ ಹದ್ದಣ್ಣವರ ಮುಖ್ಯಮಂತ್ರಿ ಪದಕಕ್ಕೆ ಆಯ್ಕೆಯಾಗಿದ್ದಾರೆ.

ಪ್ರೌಢ ಶಿಕ್ಷಣವನ್ನು ಲೋಯಲಾ ಕಾನ್ವೆಂಟ್ ಹೈಸ್ಕೂಲ್‌ನಲ್ಲಿ ಮುಗಿಸಿ ನಂತರ ಜೆ.ಟಿ. ಕಾಲೇಜಿನಲ್ಲಿ ಬಿಎಸ್ಸಿ ಪದವಿ ಅಧ್ಯಯನ ನಡೆಸಿದ್ದಾರೆ. ಕೌಶಾಳಿ ಯುನಿವರ್ಸಿಟಿ ಧಾರವಾಡದಲ್ಲಿ ಎಂಬಿಎ ಪದವಿ ಪಡೆದು, ಕೆಎಎಸ್ ಪರೀಕ್ಷೆ ಉತ್ತೀರ್ಣರಾಗಿ ಡಿವೈಎಸ್ಪಿ ಹುದ್ದೆಯನ್ನು ಪಡೆದರು. ಒಬ್ಬ ನಿಷ್ಠಾವಂತ ಮತ್ತು ಪ್ರಾಮಾಣಿಕ ಅಧಿಕಾರಿಯಾಗಿ, ಡಿವೈಎಸ್ಪಿ ಹುದ್ದೆಯಲ್ಲಿ ಅವರಿಗೆ 2012ರಲ್ಲಿ ಸರ್ ಎಂ. ವಿಶ್ವೇಶ್ವರಯ್ಯ ಪ್ರಶಸ್ತಿ ಕೂಡ ಒಲಿದು ಬಂದಿದೆ.

ವಿಜಯಪುರ ಮತ್ತು ಬಾಗಲಕೋಟೆ ಲೋಕಾಯುಕ್ತ ಹುದ್ದೆಯನ್ನು ಅವರು ನಿಭಾಯಿಸಿ, ಸದ್ಯ ಬೆಂಗಳೂರಿನ ಪಶ್ಚಿಮ ವಿಭಾಗದ ಟ್ರಾಫಿಕ್ ಡಿಸಿಪಿ ಹುದ್ದೆಯಲ್ಲಿದ್ದಾರೆ. ಅವರು ಈಗ ಮುಖ್ಯಮಂತ್ರಿ ಪದಕಕ್ಕೆ ಭಾಜನರಾಗಿದ್ದು, ಇದೀಗ ಮುಖ್ಯಮಂತ್ರಿಗಳ ಪದಕಕ್ಕೆ ಆಯ್ಕೆಯಾಗಿರುವುದಕ್ಕೆ ಗದಗ-ಬೆಟಗೇರಿಯ ಹೆಲ್ತ್‌ಕ್ಯಾಂಪ್ ಯುವಕ ಸಂಘ, ಮಹಿಳಾ ಸಂಘ-ಸಂಸ್ಥೆಗಳು ಹಾಗೂ ಸಾರ್ವಜನಿಕರು ಅಭಿನಂದಿಸಿದ್ದಾರೆ.

## ಗುರುವಂದನಾ ಕಾರ್ಯಕ್ರಮದಲ್ಲಿ ಸಂಸದ ಬಸವರಾಜ ಬೊಮ್ಮಾಯಿ


# ನಿಮ್ಮ ಸೇವೆಗೆ ಸದಾ ಸಿದ್ಧ

■ವಿಜಯಸಾಕ್ಷಿ ಸುದ್ದಿ, ಹಾನಗಲ್

ಕೇಂದ್ರ ಸರ್ಕಾರದ ಒಬಿಸಿ ಪಟ್ಟಿಯಲ್ಲಿ ಸೇರಿಸಲು ವೀರಶೈವ ಲಿಂಗಾಯತ ಸಮುದಾಯದ ಬೇಡಿಕೆಯಿದ್ದು, ಸಂಸದನಾಗಿ ಈ ವಿಷಯವನ್ನು ಗಂಭೀರವಾಗಿ ತೆಗೆದುಕೊಂಡು ರಾಜ್ಯ ಸರ್ಕಾರದ ಸಂಪೂರ್ಣ ಬೆಂಬಲ ಪಡೆದು ಅತ್ಯಂತ ಪ್ರಮಾಣಿಕವಾಗಿ, ಶ್ರಮವಹಿಸಿ ಮಾಡುತ್ತೇನೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಶನಿವಾರ ಹಾವೇರಿ ಜಿಲ್ಲೆಯ ಹಾನಗಲ್ ಪಟ್ಟಣದಲ್ಲಿ ಶ್ರೀಕ್ಷೇತ್ರ ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆ ವತಿಯಿಂದ ಏರ್ಪಡಿಸಿದ ಗುರುವಂದನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ನಾಗೇನಹಳ್ಳಿ ಏತ ನೀರಾವರಿ ಯೋಜನೆಯನ್ನು 10-12 ವರ್ಷಗಳ ಹಿಂದೆ ಮಾಡಿದ್ದೆವು. ನಮ್ಮ ನಾಯಕರಾಗಿದ್ದ ಸಿ.ಎಂ. ಉದಾಸಿಯವರು ಏತ ನೀರಾವರಿ ಯೋಜನೆಗಳನ್ನು ಮಾಡಬೇಕೆಂದು ಹೇಳಿದಾಗ ಹಾನಗಲ್‌ನಲ್ಲಿ ಮೂರು ಏತನೀರಾವರಿ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ಉದಾಸಿಯವರ ಪ್ರಯತ್ನ, ಶ್ರದ್ಧೆಯಿಂದ ಮಾಡಿದ್ದೇವೆ. ಅದಕ್ಕೆ ನನ್ನ ಸಂಪೂರ್ಣ ಸಹಕಾರ ಇತ್ತು. ಅಂದಿನ ಮುಖ್ಯಮಂತ್ರಿ ಯಡಿಯೂರಪ್ಪ ಅವರ ಆಶೀರ್ವಾದ ಇತ್ತು. ಹೀಗಾಗಿ ಹಾನಗಲ್ ತಾಲೂಕಿನ ಬಹುತೇಕ ಕೆರೆಗಳು ತುಂಬುವಂತಾಗಿದೆ ಎಂದರು.



ಪುಷ್ಪಗಿರಿ ಸಂಸ್ಥೆಯ ಮೂವರು ಪರಮಪೂಜ್ಯರ ಆಶೀರ್ವಾದದಿಂದ ಸಮಾಜ ಕಟ್ಟಲು ಏನೆಲ್ಲ ಕಾರ್ಯಕ್ರಮ ಮಾಡುತ್ತಾರೆ. ಅದಕ್ಕೆ ನಿಮ್ಮ ಭಕ್ತನಾಗಿ ಸೇವೆ ಮಾಡಲು ನಾನು ಸದಾ ಸಿದ್ಧನಿದ್ದೇನೆ. ನಾನು ಮುಖ್ಯಮಂತ್ರಿ ಇದ್ದಾಗ ಸ್ತ್ರೀ ಸಾಮರ್ಥ್ಯ ಯೋಜನೆ ಜಾರಿ ಮಾಡಿದ್ದೇನೆ. ಅದರಿಂದ ಪ್ರತಿ ಸಂಘಕ್ಕೆ 5 ಲಕ್ಷ ರೂ. ಕೊಡುವ ಕೆಲಸ ಮಾಡಿದೆ. ಕೇಂದ್ರದ ಸಂಜೀವಿನಿ ಯೋಜನೆ ಅಡಿಯಲ್ಲಿ 350 ಕೋಟಿಗೂ ಹೆಚ್ಚು ಅನುದಾನವನ್ನು ಪ್ರತಿ ಸಂಘಕ್ಕೂ ಒಂದು ಲಕ್ಷದಂತೆ ನೀಡಿದ್ದೇವೆ. ಮಹಿಳಾ ಸ್ವಸಹಾಯ ಸಂಘಕ್ಕೆ ಏನಾದರೂ ಸಹಾಯ ಬೇಕಾದರೆ ನಿಮ್ಮ ಒಬ್ಬ ಸಹೋದರ ನಿಮ್ಮ ಜೊತೆಗೆ ಇದ್ದಾನೆ ಎಂದು ಭಾವಿಸಿ ನಿಮ್ಮ ಕೆಲಸ ಮಾಡಿಸಿಕೊಳ್ಳಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪುಷ್ಪಗಿರಿ ಸಂಸ್ಥಾನ ಮಠದ ಪರಮಪೂಜ್ಯರಾದ ಶ್ರೀ ಡಾ. ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ, ಹೋತನಹಳ್ಳಿಯ ಸಿದ್ದಾರೂಢ ಮಠದ ಪರಮಪೂಜ್ಯರಾದ ಶ್ರೀ ಶಂಕರಾನಂದ ಸ್ವಾಮೀಜಿ, ಹರಿಹರ ತಾಲೂಕಿನ ಸಿದ್ಧಾಶ್ರಮದ ಪರಮಪೂಜ್ಯರಾದ ಶ್ರೀ ಯೋಗಾನಂದ ಸ್ವಾಮೀಜಿ ಸೇರಿದಂತೆ ಮಾಜಿ ಶಾಸಕರಾದ ಶಿವರಾಜ ಸಜ್ಜನ, ಮುಖಂಡರಾದ ಪದ್ಮನಾಭ ಕುಂದಾಪುರ, ಬಸವರಾಜ ಹಾದಿಮನಿ, ರಾಜಶೇಖರ ಕಟ್ಟೇಗೌಡ್ರ, ಶಿವಲಿಂಗಪ್ಪ ತಲ್ಲೂರ, ಬಿ.ಎಸ್. ದಳವಾಯಿ ಮುಂತಾದ ಮುಖಂಡರು, ಸಾರ್ವಜನಿಕರು ಉಪಸ್ಥಿತರಿದ್ದರು.\

ಗುರುಗಳು ಆಜ್ಞೆ ಮಾಡಿದಂತೆ ಸಮುದಾಯ ಭವನ ನಿರ್ಮಾಣಕ್ಕೆ ಸಂಸದರ ನಿಧಿಯಿಂದ 25 ಲಕ್ಷ ರೂ. ಅನುದಾನ ನೀಡಲಾಗುವುದು. ಅಲ್ಲದೇ ನಮ್ಮ ಸ್ವಂತ ಟ್ರಸ್ಟ್‌ನಿಂದ ತಾವು ಮಾಡುವ ಕೆಲಸಕ್ಕೆ ಹಾವೇರಿ ಜಿಲ್ಲೆಯ ಯಾವ ತಾಲೂಕಿನಲ್ಲಿ ಪ್ರತಿ ತಾಲೂಕಿಗೂ ಗ್ರಾಮೀಣಾಭಿವೃದ್ಧಿ ಸಂಘಗಳಿಗೆ 10 ಲಕ್ಷ ರೂ. ನೀಡಲಾಗುವುದು ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

# ಕ್ರೀಡೆಯಿಂದ ಉತ್ತಮ ಭವಿಷ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಗದಗ ಗ್ರಾಮೀಣ ಸಮನ್ವಯಾಧಿಕಾರಿ ಜಿ.ಎ. ಭಾವಿಕಟ್ಟಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಸರಕಾರಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಮುಳಗುಂದ ವಲಯ ಮಟ್ಟದ ಪ್ರೌಢಶಾಲಾ ಕ್ರೀಡಾಕೂಟದ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಪ್ರೌಢ ಹಂತದಲ್ಲಿ ಮಕ್ಕಳು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಉತ್ತಮ ಭವಿಷ್ಯಕ್ಕೆ ಸಹಕರಿಯಾಗಲಿದೆ. ಕ್ರೀಡಾ ಕ್ಷೇತ್ರದಲ್ಲಿ ಸಾಕಷ್ಟು ಕ್ರೀಡಾಪಟುಗಳು ಸಾಧನೆ ಮಾಡಿದ್ದು, ಉತ್ತಮ ಸಾಧನೆಗೈಯುವ ಮೂಲಕ ಉತ್ತಮ ಭವಿಷ್ಯ ರೂಪಿಸಿಕೊಂಡಿದ್ದಾರೆ ಎಂದರು.

ಶಾಲಾ ಪ್ರಧಾನ ಗುರು ಎಚ್.ಆರ್. ಸಕ್ರಿ ಕ್ರೀಡಾ ಜ್ಯೋತಿ ಬೆಳಗಿಸಿ ಮಾತನಾಡಿ, ಪ್ರತಿಯೊಬ್ಬರೂ ಕ್ರೀಡಾಕೂಟದಲ್ಲಿ ಭಾಗವಹಿಸುವುದು ಮುಖ್ಯವಾಗಿದ್ದು, ಸೋಲು-ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸಬೇಕು. ಕ್ರೀಡೆಯಿಂದ ಭವಿಷ್ಯದಲ್ಲಿ ಸಾಕಷ್ಟು ಅವಕಾಶಗಳು ದೊರೆಯುತ್ತವೆ. ಇದರಿಂದ ಮುಂದಿನ ಜೀವನಕ್ಕೆ ಸಹಕಾರಿಯಾಗುತ್ತದೆ ಎಂದರು.

ಗದಗ ಗ್ರಾಮೀಣ ದೈಹಿಕ ಪರಿವೀಕ್ಷಕ ಪವಾರ, ಎಸ್.ಎಫ್. ಗಡಾದ, ವಿ.ಡಿ. ಕಣವಿ, ಶಿಕ್ಷಕ ಮುಶಣ್ಣವರ, ಎನ್.ವಾಯ್. ಸಂಗೊಂದಿ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಕ್ರೀಡಾ ಮನೋಭಾವನೆ ಬೆಳೆಯಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕ್ರೀಡೆ ಪರಸ್ಪರ, ಸ್ನೇಹ, ಬಾಂಧವ್ಯ ವೃದ್ಧಿಸುವ, ಹೊಂದಾಣಿಕೆ ಮತ್ತು ನಾಯಕತ್ವದ ಗುಣ ಬೆಳೆಸುವಲ್ಲಿ ನೆರವಾಗುತ್ತದೆ ಎಂದು ತಾಲೂಕಾ ದೈಹಿಕ ಶಿಕ್ಷಣ ಪರಿವೀಕ್ಷಕ ಎಂ.ಎಂ. ಹವಳದ ಹೇಳಿದರು.

ಅವರು ಪಟ್ಟಣದ ಎಚಿಜಿಎಂ ಯುನಿವರ್ಸಲ್ ಶಾಲೆಯಲ್ಲಿ ಗ್ರೂಪ್ ನಂ.2ರ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳ ದೈಹಿಕ, ಮಾನಸಿಕ, ಬೌದ್ಧಿಕ ಬೆಳವಣಿಗೆಗೆ ಕ್ರೀಡೆಗಳು ಪೂರಕ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಪ್ರಾಥಮಿಕ ಶಾಲಾ ಹಂತದಲ್ಲಿಯೇ ಕ್ರೀಡಾ ಮನೋಭಾವ ಹೊಂದಿ ಆಸಕ್ತಿಯಿಂದ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದರು.



ಕ್ರೀಡಾ ಧ್ವಜಾರೋಹಣ ನೆರವೇರಿಸಿದ ಸಂಸ್ಥೆಯ ಕಾರ್ಯದರ್ಶಿ ಬಸವೇಶ ಮಹಾಂತಶೆಟ್ಟರ ಮಾತನಾಡಿ, ಕ್ರೀಡೆಯಿಂದ ಶಿಸ್ತು, ಸಂಯಮ ಮತ್ತು ಆರೋಗ್ಯ ವೃದ್ಧಿಸುತ್ತದೆ. ಕ್ರೀಡೆಯಲ್ಲಿ ಗೆಲ್ಲಲು ಉತ್ತಮ ತರಬೇತಿ ಅಗತ್ಯ. ಪರಿಣತಿಯನ್ನು ಗಳಿಸಲು ಸತತ ಸಾಧನೆ ಮಾಡಬೇಕು. ಎಲ್ಲಾ ವಿದ್ಯಾರ್ಥಿಗಳೂ ಸ್ಪರ್ಧಾ ಮನೋಭಾವದಿಂದ ಭಾಗವಹಿಸಿ ಕ್ರಿಡಾಕೂಟವನ್ನು ಯಶಸ್ವಿಗೊಳಿಸಬೇಕು ಎಂದು ಕರೆನೀಡಿದರು.

ಬಿಆರ್‌ಪಿ ಈಶ್ವರ ಮೆಡ್ಲೇರಿ ಮಾತನಾಡಿದರು. ಶಿವಾನಂದ ಅಸುಂಡಿ ದೊಡ್ಡೂರ ಸಿಆರ್‌ಪಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ರಮೇಶ ನವಲೆ, ಎಸ್.ಎಫ್. ಕೊಡ್ಲಿ, ಸ.ಪ್ರಾ. ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ಹರ್ಲಾಪುರ, ಕಾರ್ಯದರ್ಶಿ ಚಂದ್ರು ನೇಕಾರ, ಉಪಾಧ್ಯಕ್ಷ ಡಿ.ಡಿ .ಲಮಾಣಿ, ಸಿಆರ್‌ಪಿಗಳಾದ ಉಮೇಶ್ ನೇಕಾರ, ಎನ್.ಎ. ಮುಲ್ಲಾ, ಸತೀಶ ಬೋಮಲೆ, ಎಮ್.ಎಸ್. ಕಾಳೆ, ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಕೆ. ದ್ಯಾವನಗೌಡ್ರ, ಎಮ್.ಐ. ಕಣಕೆ, ಗುತ್ತಲ, ಮುಖ್ಯ ಶಿಕ್ಷಕಿ ಕವಿತಾ ಮೆಣಸಗಿ, ವಿವಿಧ ಶಾಲೆಗಳ ಕ್ರೀಡಾಪಟುಗಳು ಹಾಗೂ ಶಿಕ್ಷಕರು ಭಾಗವಹಿಸಿದ್ದರು.

# 'ತಾಯಿಯ ಹೆಸರಲ್ಲಿ ಒಂದು ವೃಕ್ಷ' ಅಭಿಯಾನ



■ವಿಜಯಸಾಕ್ಷಿ ಸುದ್ದಿ, ನರೇಗಲ್

ಸಮೀಪದ ನಿಡಗುಂದಿ ಗ್ರಾಮದ ಸಮುದಾಯ ಆರೋಗ್ಯ ಕೇಂದ್ರದ ಆವರಣದಲ್ಲಿ ತಾಲೂಕು ಪಂಚಾಯತ್, ಅರಣ್ಯ ಇಲಾಖೆ, ಗ್ರಾಮ ಪಂಚಾಯತ್ ಸಹಯೋಗದಲ್ಲಿ ವಿಶ್ವ ಪರಿಸರ ದಿನದ ಅಂಗವಾಗಿ 'ತಾಯಿಯ ಹೆಸರಿನಲ್ಲಿ ಒಂದು ವೃಕ್ಷ ಅಭಿಯಾನ' ಕಾರ್ಯಕ್ರಮಕ್ಕೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಬಡಿಗೇರ ಚಾಲನೆ ನೀಡಿದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಬಡಿಗೇರ ಮಾತನಾಡಿ, ಪರಿಸರ ನಾಶದಿಂದ ಪ್ರಕೃತಿ ವಿಕೋಪಗಳು ಹೆಚ್ಚಾಗುತ್ತಿದ್ದು, ಮನುಷ್ಯನ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಅದನ್ನು ತಪ್ಪಿಸಲು ಪರಿಸರ ರಕ್ಷಣೆಗೆ ಮುಂದಾಗಬೇಕಾಗಿದೆ. ಆ ನಿಟ್ಟಿನಲ್ಲಿ ತಾಯಿಯ ಹೆಸರಿನಲ್ಲಿ ಒಂದು ವೃಕ್ಷ ಅಭಿಯಾನ ದೇಶಾದ್ಯಂತ ಹಮ್ಮಿಕೊಳ್ಳಲಾಗುತ್ತಿದೆ. ಪ್ರತಿಯೊಬ್ಬರೂ ತಮ್ಮ ತಾಯಿಯ ಹೆಸರಿನಲ್ಲಿ ಒಂದು ಸಸಿ ನೆಟ್ಟು ಅವುಗಳನ್ನು ಪೋಷಿಸಿ ಬೆಳೆಸುವ ಮೂಲಕ ಪರಿಸರ ರಕ್ಷಣೆಯ ಮುಂದಾಗಬೇಕು ಎಂದರು.

ಸಾಮಾಜಿಕ ಅರಣ್ಯ ಇಲಾಖೆ ಅಧಿಕಾರಿ ರಾಮಣ್ಣ ಪೂಜಾರ ಮಾತನಾಡಿ, ವಿಶ್ವ ಪರಿಸರ ದಿನದ ಅಂಗವಾಗಿ ಪ್ರಧಾನ ಮಂತ್ರಿಯವರ ತಾಯಿಯ ಹೆಸರಿನಲ್ಲಿ ಒಂದು ವೃಕ್ಷ ಅಭಿಯಾನ ಹಮ್ಮಿಕೊಳ್ಳಲು ಕರೆ ನೀಡಿದ್ದು, ಅದರಂತೆ ದೇಶಾದ್ಯಂತ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷೆ ಗೀತಾ ಕುಕನೂರು, ಮರ್ತುಜಾ ಮುಲ್ಲಾ, ಅಂದಪ್ಪ ಚಲವಾದಿ, ಪಿಡಿಒ ಅಮರೇಶ ಮೂಲಿಮನಿ, ಕಾರ್ಯದರ್ಶಿ ಶರಣಪ್ಪ ಮೇಟಿ, ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ರೇಖಾ ಹೊಸಮನಿ, ಅಂದಪ್ಪ ಬಿಚ್ಚೂರು, ಗೋವಿಂದ ಪೂಜಾರ, ರಮೇಶ ಸೇಬಗೊಂಡ, ಹೊನ್ನಪ್ಪ ಕಂಬಳಿ, ಶರಣಪ್ಪ ಗಡಾದ, ಜಗದೀಶ, ಅರಣ್ಯ ಇಲಾಖೆ, ಆರೋಗ್ಯ ಇಲಾಖೆ, ಗ್ರಾ.ಪಂ ಸಿಬ್ಬಂದಿಗಳು ಇದ್ದರು.

# ಛಾಯಾಗ್ರಾಹಕ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಸೋಮವಾರ ತಾಲೂಕಾ ಛಾಯಾಗ್ರಾಹಕರ ಕ್ಷೇಮಾಭಿವೃದ್ಧಿ ಸಂಘದ ಸಭೆ ಜರುಗಿತು. ಸಭೆಯಲ್ಲಿ ತಾಲೂಕು ಘಟಕದ ನೂತನ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಗಂಗಾಧರ ಬಾಲೇಹೊಸೂರು ಅವರನ್ನು ಗೌರವಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು.



ತಾಲೂಕು ಘಟಕದ ಅಧ್ಯಕ್ಷರಾಗಿ ನೀಲಕಂಠ ಬುರುಡಿ, ಉಪಾಧ್ಯಕ್ಷರಾಗಿ ರಾಯಪ್ಪ ಹತ್ತಿಕಾಳ, ಸಹಕಾರ್ಯದರ್ಶಿಯಾಗಿ ಶ್ರೀಕಾಂತ ಹೂಗಾರ, ಖಜಾಂಚಿಯಾಗಿ ದಾದಫೀರ್ ಯಲ್ಲನೂರ, ನಿರ್ದೇಶಕರನ್ನಾಗಿ ಶಿವರಾಜ ಗೋಸಾವಿ , ರವಿ ಗೌರಿಹಳ್ಳಿ, ಆನಂದ ಚಕ್ರಸಾಲಿ, ಚೇತನ ಮಾಗಡಿ, ಪ್ರಶಾಂತ ಹಡಪದ, ಅಶೋಕ ಕೋರಕನವರ, ರಫೀಕ ಜಮಖಂಡಿ ಅವರನ್ನು ಒಮ್ಮತದಿಂದ ಆಯ್ಕೆ ಮಾಡಲಾಯಿತು.

## 'ಅಸ್ಮಾಕಂ ಸಂಸ್ಕೃತಂ' ಸರಣಿ ಸಂಸ್ಕೃತೋತ್ಸವ ಕಾರ್ಯಕ್ರಮ ಉದ್ಘಾಟನೆ

# ದೇವಭಾಷೆಯ ಕಲಿಕೆಗೆ ಮುಂದಾಗಿ



■ವಿಜಯಸಾಕ್ಷಿ ಸುದ್ದಿ, ಗದಗ

ಅಸ್ಮಾಕಂ ಅಂದರೆ ಇದು ನನ್ನ ಅಲ್ಲ, 'ನಮ್ಮ ಸಂಸ್ಕೃತ' ಕಾರ್ಯಕ್ರಮ. ಎಲ್ಲ ವಿದ್ಯಾರ್ಥಿಗಳು ಸಂಸ್ಕೃತವನ್ನು ಹೆಚ್ಚು ಹೆಚ್ಚು ಓದುವದರ ಮೂಲಕ ಸಂಸ್ಕೃತ ಭಾಷೆಯನ್ನು ನಮ್ಮದಾಗಿಸಿಕೊಳ್ಳಬೇಕು. ಇತರರಿಗೂ ಈ ವಿದ್ಯೆಯನ್ನು ಮುಟ್ಟಿಸಬೇಕು. ಮನುಷ್ಯನ ಧ್ವನಿಪಟಲಕ್ಕೆ ಸಂಬಂಧಿಸಿದ ಗುಕ್ಕಿಸುವ ರೋಗ ಸಂಸ್ಕೃತ ಕಲಿಯುವದರಿಂದ ದೂರವಾಗುತ್ತದೆ ಎಂದು ವೈಜ್ಞಾನಿಕವಾಗಿ ಸಾಬೀತಾಗಿದೆ ಎಂದು ವಿ. ಗಣಪತಿ ಎಸ್.ಗಾಂವ್ಕರ್ ಹೇಳಿದರು.

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಬೆಂಗಳೂರು, ಸಂಸ್ಕೃತ ಶಿಕ್ಷಣ ನಿರ್ದೇಶನಾಲಯ ಬೆಂಗಳೂರು ಹಾಗೂ ಜಗದ್ಗುರು ತೋಂಟದಾರ್ಯ ಮಠ ಗದಗ ಇವುಗಳ ಸಹಯೋಗದಲ್ಲಿ ನಗರದ ಜ. ತೋಂಟದಾರ್ಯ ಸಂಸ್ಕೃತ ಪಾಠಶಾಲೆಯ ಅಸ್ಮಾಕಂ ಸಂಸ್ಕೃತಂ ಸರಣಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ರಾಷ್ಟ್ರಕವಿ ಕುವೆಂಪುರವರ ರಾಮಾಯಣದರ್ಶನಂ ಕಾವ್ಯವನ್ನು ಸರಿಯಾಗಿ ಅರ್ಥೈಸಿಕೊಳ್ಳಲು ಸಂಸ್ಕೃತದ ಜ್ಞಾನ ಅವಶ್ಯ. ಸಂಸ್ಕೃತ ವಿ.ವಿ ಕುಲಪತಿಗಳಾದ ಡಾ. ಅಹಲ್ಯಾರವರು ಸಂಸ್ಕೃತ ಬೆಳವಣಿಗೆಗಾಗಿ ಎಲ್ಲ ರೀತಿಯ ಪ್ರೋತ್ಸಾಹ ಕೊಡುತ್ತಿದ್ದಾರೆ. ಸಂಸ್ಕೃತ ವಿ.ವಿ ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ಈ ಸರಣಿ ಕಾರ್ಯಕ್ರಮಗಳು ರಾಜ್ಯಾದ್ಯಂತ ಜರುಗಿ ಸಾಮಾನ್ಯ ಜನರಿಗೆ ತಲುಪಿ ಸಂಸ್ಕೃತ ಜನಭಾಷೆಯಾಗುವತ್ತ ಶಿಕ್ಷಕರು, ಸಂಸ್ಕೃತಜ್ಞರು ಪ್ರಯತ್ನಿಸಬೇಕಾಗಿದೆ ಎಂದರು. ಜ.ತೋ. ಸಂಸ್ಕೃತ ಪಾಠಶಾಲೆಯಿಂದ ತೋಂಟದಾರ್ಯ ಮಠದ ವರೆಗೆ ಸಂಸ್ಕೃತ ಘೋಷಣೆಗಳನ್ನು ಕೂಗುತ್ತಾ ಜಾಥಾ ನಡೆಸಲಾಯಿತು. ಮುಖ್ಯಾಧ್ಯಾಪಕರಾದ ವಿದ್ವಾನ್ ಎಸ್.ಎನ್. ಶಿಂಪಿಗೇರವರು ಪ್ರಾಸ್ತಾವಿಕ ನುಡಿಗಳನ್ನಾಡಿ ಸ್ವಾಗತಿಸಿದರು. ಶಿಕ್ಷಕರಾದ ಮಹಾಂತೇಶ ಮಾದರ ನಿರೂಪಿಸಿದರು. ಶಿಕ್ಷಕಿಯರಾದ ವಿಜಯಲಕ್ಷ್ಮೀ ಪಟ್ಟಣಶೆಟ್ಟಿ, ಸರೋಜಾ ಉಳವಿ, ಹಿರಿಯ ಶಿಕ್ಷಕರಾದ ಎಸ್.ಎಸ್. ನೀಲಗುಂದ, ಕಳಕಪ್ಪ ಕುರ್ತಕೋಟಿ ಮುಂತಾದವರು ಉಪಸ್ಥಿತರಿದ್ದರು. ವಿಶ್ವ ಬಾಹ್ಯಾಕಾಶ ದಿನದ ಅಂಗವಾಗಿ ಚಂದ್ರಗೀತೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಅಧ್ಯಕ್ಷತೆ ವಹಿಸಿದ್ದ ಜ.ತೋ. ಸಂಸ್ಕೃತ ಪಾಠಶಾಲೆಯ ನಿವೃತ್ತ ಮುಖ್ಯಾಧ್ಯಾಪಕ ವಿದ್ವಾನ್ ಎಸ್.ವ್ಹಿ. ಹಿರೇಮಠ ಮಾತನಾಡಿ, ವಿಶ್ವದ ಅನೇಕ ಭಾಷೆಗಳು ಸಂಸ್ಕೃತದ ನೆರವು ಪಡೆದುಕೊಂಡಿವೆ. ಆಧುನಿಕ ಯುಗದಲ್ಲಿ ಕಂಪ್ಯೂಟರ್‌ಗೆ ಸಹ ಸರಿಯಾಗಿ ಹೊಂದುವಂತಹ ಭಾಷೆ ಸಂಸ್ಕೃತವಾಗಿದೆ. ಸಂಸ್ಕೃತ ಕಲಿತವರಿಗೆ ವಿದೇಶಗಳಲ್ಲಿಯೂ ಬೇಡಿಕೆ ಇದೆ. ಅನೇಕ ದೇಶಗಳ ಜನ ಸಂಸ್ಕೃತ ಕಲಿಯಲು ಉತ್ಸುಕರಾಗಿದ್ದಾರೆ. ಸಂಸ್ಕೃತ ಕಲಿತವರಿಗೆಲ್ಲ ಮುಂದಿನ ದಿನಮಾನಗಳಲ್ಲಿ ಉತ್ತಮ ಬೇಡಿಕೆ ಇದೆ. ಉತ್ತಮ ಸಂಸ್ಕಾರ ಹೊಂದಿದ ಈ ಭಾಷೆಯನ್ನು ವಿದ್ಯಾರ್ಥಿಗಳು ಹೆಚ್ಚು ಹೆಚ್ಚು ಕಲಿಯಬೇಕೆಂದರು.

## ಕದಳಿಶ್ರೀ ವೇದಿಕೆಯಿಂದ ಅಮೃತ ಭೋಜನ, ಕಲಿಕಾ ಸಾಮಗ್ರಿ ವಿತರಣೆ

# ಯಶಸ್ಸಿಗೆ ನಿರಂತರ ಪರಿಶ್ರಮ ಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಕೌಶಲಗಳನ್ನು ವೃದ್ಧಿಸಿಕೊಳ್ಳುವ ಕಾರ್ಯದಲ್ಲಿ ತೊಡಗಬೇಕು. ಯಶಸ್ಸಿಗೆ ನಿರಂತರ ಪರಿಶ್ರಮ ಅವಶ್ಯ. ಹಿಂಜರಿಕೆಯನ್ನು ಬಿಟ್ಟು ಓದಿನಲ್ಲಿ ತೊಡಗಿಸಿಕೊಂಡು ಯಶಸ್ಸು ಸಾಧಿಸಬೇಕೆಂದು ಚಿಂತಕ ಶಿವಾಚಾರ್ಯ ಹೊಸಳ್ಳಿಮಠ ಹೇಳಿದರು.

ಅವರು ಗದಗ ಜಿಲ್ಲಾ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆಯಿಂದ ಗದುಗಿನ ಗಂಗಿಮಡಿಯ ಸರಕಾರಿ ಕನ್ನಡ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ಅಮೃತ ಭೋಜನ ಜ್ಞಾನಸಿಂಚನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು.

ಓದುವ ಹವ್ಯಾಸದಿಂದ ಜ್ಞಾನದ ವಿಕಾಸವಾಗುವದು. ಸ್ಪಷ್ಟ ಓದು ನಮ್ಮಲ್ಲಿ ಜ್ಞಾನದ ತಿಳುವಳಿಕೆಯನ್ನು ಹೆಚ್ಚಿಸುತ್ತದೆ. ಮಕ್ಕಳು ಉತ್ತಮ ಪುಸ್ತಕಗಳನ್ನು ಓದುವ ರೂಢಿ ಮಾಡಿಕೊಳ್ಳಬೇಕೆಂದರು.

ಮಕ್ಕಳಿಗೆ ಸಿಹಿಭೋಜನ ಉಣಬಡಿಸಿ ಮಾತನಾಡಿದ ಚಿಂತಕ ಖ್ವಾಜಮೈನುದ್ದೀನ್ ಜಾನಿಸಾಬ ಹಣಗಿ ಮಾತನಾಡಿ, ಪ್ರಾಥಮಿಕ ಹಂತದಲ್ಲಿ ಪಡೆಯುವ ಶಿಕ್ಷಣವು ಮುಂದಿನ ಉನ್ನತ ಭವಿಷ್ಯಕ್ಕೆ ದಾರಿದೀಪವಾಗುತ್ತದೆ. ನಮ್ಮ ಜೀವನದಲ್ಲಿ ಒಳ್ಳೆಯ ನಡತೆ, ಇತರರ ನೋವಿಗೆ ಸ್ಪಂದಿಸುವ ಸದ್ಗುಣಗಳನ್ನು ಬೆಳಸಿಕೊಳ್ಳಬೇಕೆಂದರು.



ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿದ ಚಿಂತಕ ಡಾ. ಎ.ಎನ್. ಶಾಲಗ್ಘರ, ಉತ್ತಮ ಬರವಣಿಗೆ, ಸಂವಹನ ಕೌಶಲ ಮಕ್ಕಳಿಗೆ ಅವಶ್ಯವಾಗಿದ್ದು, ಪ್ರತಿದಿನದ ಪತ್ರಿಕೆಗಳನ್ನು ಓದುವ ರೂಢಿ ಇದ್ದಲ್ಲಿ ಅದು ಹೆಚ್ಚಿನ ಜ್ಞಾನವನ್ನು ಬೆಳೆಸಿಕೊಳ್ಳಬಹುದು ಎಂದರು.

ಸಾಮಾಜಿಕ ಕಾರ್ಯಕರ್ತ ರಮೇಶ ತೋಟದ ಮಾತನಾಡಿ, ಆದರ್ಶ ವಿಚಾರಗಳನ್ನು, ಹಿರಿಯರ ನಾಣ್ನುಡಿಗಳನ್ನು ತಾಳ್ಮೆಯಿಂದ ಕೇಳುವದು, ಅವುಗಳನ್ನು ಪಾಲಿಸುವದು ಮಕ್ಕಳಿಗೆ ಅವಶ್ಯವಾಗಿದೆ ಎಂದರು.

ಗದಗ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ಬಿ.ಕೆ. ಸಾವಿತ್ರಿ, ಬಿ.ಕೆ. ಮುತ್ತಕ್ಕ, ಬಿ.ಕೆ.ಜ್ಯೋತಿ ಅವರುಗಳು ರಕ್ಷಾ ಬಂಧನದ ಮಹತ್ವವನ್ನು ವಿವರಿಸಿದರು.

ಐ.ಡಿ. ಕಬ್ಬೇರಹಳ್ಳಿ, ಆರ್.ಬಿ. ಹಾದಿಮನಿ ವಚನ ಪ್ರಾರ್ಥನೆಗೈದರು. ಸಂಪನ್ಮೂಲ ವ್ಯಕ್ತಿ ಕೆ.ಎಸ್. ಬೇಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಜಿ. ಗಿರಿತಮ್ಮಣ್ಣವರ ಸ್ವಾಗತಿಸಿದರು. ವ್ಹಿ.ಆರ್. ಹಾಂಶಿ ನಿರೂಪಿಸಿದರು. ಸಿ.ಎಸ್. ಬೆಳಹಾರ ನಿರ್ವಹಿಸಿದರು. ಆರ್.ಡಿ. ಮುಗಜಿ ಪರಿಚಯಿಸಿದರು. ಜ್ಯೋತಿ ಅಂಗಡಿ ವಂದಿಸಿದರು.

ಕಾರ್ಯಕ್ರಮದಲ್ಲಿ ಅಲ್ತಾಫ ನದಾಫ್, ಗೀತಾ ಕುಸಬಿ, ಪಾಲಾಕ್ಷಿಬಾಯಿ ದಿವಟೆ, ಸುನೀತಾ ರಾಮದುರ್ಗ, ದೀಪಾ ಮುಂತಾದವರಿದ್ದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲಾ ಮುಖ್ಯೋಪಾಧ್ಯಾಯೆ ರತ್ನಾ ಸಂಕಣ್ಣವರ, ಮಹಿಳಾ ಸಂಘಟನೆ ಕದಳಿಶ್ರೀ ವೇದಿಕೆಯು ಮಕ್ಕಳಿಗಾಗಿ ವಿಶೇಷ ಕಾರ್ಯಕ್ರಮ ಸಂಯೋಜಿಸಿ ಸಿಹಿಭೋಜನ, ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಿಗೆ ಅನುಕೂಲವಾಗುವ ಶೈಕ್ಷಣಿಕ ಸಾಮಗ್ರಿಗಳನ್ನು ವಿತರಿಸಿ ಮಾನವೀಯ ಮೌಲ್ಯ, ಪರಸ್ಪರ ಗೌರವ, ಹಿರಿಯ ಬಗೆಗೆ ಸಹಾನುಭೂತಿಯಂತಹ ಶರಣರ ಸಂದೇಶಗಳನ್ನು ಮಕ್ಕಳಿಗೆ ತಲುಪಿಸುವ ಕಾರ್ಯ ಮಾಡುತ್ತಿರುವದು ಶ್ಲಾಘನೀಯ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka